# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 193 | Volume - 02 Issue - 193
ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | RNI No: KARKAN/2023/88462
ಕೆಎ/ಎಸ್‌ಕೆ/ಸಿಟಿಎ–874/2024–2026 | KA/SK/CTA-874/2024-2026
ಚಿತ್ರದುರ್ಗ | Chitradurga
ದಿನಾಂಕ: 20–02–2025 ಗುರುವಾರ | Date: 20-02-2025 Thursday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00

ಒಳಪುಟದ ಸುದ್ದಿಗಳು

ಶಿಶು, ತಾಯಿ ಮರಣ ಪ್ರಮಾಣ ನಿಯಂತ್ರಣಕ್ಕೆ ಪರಿಣಾಮಕಾರಿ ಯೋಜನೆ 2

ಮಾ.01 ರಿಂದ 20 ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–1 3

ಬದುಕಿನ ಯಶಸ್ಸೆಂದರೇ ಕೇವಲ ಹಣ ಗಳಿಕೆಯಲ್ಲ! 4


ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಕಾಡು ಸಿದ್ದೇಶ್ವರ ಸ್ವಾಮೀಜಿ ತಮ್ಮ ವ್ಯಕ್ತಿತ್ವಕ್ಕೆ ಚ್ಯುತಿ ತಂದುಕೊಂಡಿದ್ದಾರೆ: ಪಂಡಿತಾರಾಧ್ಯ ಶ್ರೀ

» ಹೊಸದುರ್ಗ

ತಾಲೂಕಿನ ಸಾಣೇಹಳ್ಳಿ ಮಠದ ಶ್ರೀ ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ಬುಧವಾರ ಪತ್ರಿಕ ಪ್ರಕಟಣೆ ಹೊರಡಿಸಿದ್ದು, ಅದೃಶ್ಯ ಕಾಡಸಿದ್ಧೇಶ್ವರ



ಮಹಾಸ್ವಾಮಿಗಳು ' ಖಾಸಗಿ ನ್ಯೂಸ್'ನಲ್ಲಿ ಬಸವ ಅನುಯಾಯಿಗಳನ್ನು 'ತಾಲಿಬಾನ್'ಗಳು ಎನ್ನುವ ಮೂಲಕ ತಮ್ಮ ವ್ಯಕ್ತಿತ್ವಕ್ಕೆ ಚ್ಯುತಿ ತಂದುಕೊಂಡಿದ್ದಾರೆ. ಬಸವಾನುಯಾಯಿಗಳನ್ನು ಅವಮಾನಿಸಿದ್ದಾರೆ. ಕೃಷಿ, ಶಿಕ್ಷಣ ಮತ್ತಿತರ ಕ್ಷೇತ್ರಗಳಲ್ಲಿ ಅವರ ಸಾಧನೆ ಮೆಚ್ಚಿಕೊಂಡವರಲ್ಲಿ ನಾವೂ ಒಬ್ಬರು. ಹಾಗಾಗಿ ಅವರನ್ನು ನಮ್ಮ ನಾಟಕೋತ್ಸವಕ್ಕೆ ಆಹ್ವಾನಿಸಿದ್ದೆವು. ಅರ್ಥಪೂರ್ಣ ಮಾತುಗಳನ್ನಾಡಿ ಎಲ್ಲ ಪ್ರೇಕ್ಷಕರ ಗೌರವಕ್ಕೆ ಪಾತ್ರರಾಗಿದ್ದರು. ಈಗ ಯಾರದೋ ಕಪಿಮುಷ್ಠಿಗೆ ಸಿಲುಕಿ ತಮ್ಮ ವ್ಯಕ್ತಿತ್ವಕ್ಕೆ ಮಸಿ ಬಳಿದುಕೊಂಡಿದ್ದಾರೆ. ಬಸವಾನುಯಾಯಿಗಳು 'ದಯವಿಲ್ಲದ ಧರ್ಮ ಅದಾವುದಯ್ಯಾ' ಎಂದು ನಂಬಿದವರು. ಸಕಲ ಜೀವಾತ್ಮರಿಗೆ ಒಳಿತು ಬಯಸುವವರು. ಸದುವಿನಯದ ಮೃದುಹೃದಯಿಗಳು. ಅಂತಹ ಸಾತ್ವಿಕರನ್ನು 'ತಾಲಿಬಾನ್'ಗಳೆಂದು ಅವಮಾನಿಸಿರುವುದು ಖಂಡನಾರ್ಹ. ಅವರು ತಮ್ಮ ಮಾತಿನ ಮೇಲೆ ಅದೇಕೆ ಹತೋಟಿ ಕಳೆದುಕೊಂಡರೋ? ಶ್ರೀಗಳವರು ಬಸವಾನುಯಾಯಿಗಳ ಪ್ರತಿಭಟನೆಗೆ ಮುನ್ನವೇ ಅವರ ಕ್ಷಮೆ ಕೇಳಿ ತಮ್ಮ ಅಭಿಪ್ರಾಯವನ್ನು ಬದಲಾಯಿಸಿಕೊಳ್ಳುವ ವಿವೇಕ ತೋರುವರೆಂದು ನಂಬಿದ್ದೇವೆ ಎಂದು ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ಬೇಸರ ವ್ಯಕ್ತಪಡಿಸಿದ್ದಾರೆ.

### ಹಿರಿಯ ನಾಗರಿಕರಿಗಾಗಿ ಉಚಿತ ನೇತ್ರ ತಪಾಸಣಾ ಶಿಬಿರ ಆಯೋಜನೆ



» ಚಿತ್ರದುರ್ಗ

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ 60 ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟ ಬಿ.ಪಿ.ಎಲ್ ಪಡಿತರ ಚೀಟಿ ಹೊಂದಿರುವ ಹಿರಿಯ ನಾಗರಿಕರಿಗೆ ಕಣ್ಣಿನ ಪೊರೆ (Cataract) ಶಸ್ತ್ರಚಿಕಿತ್ಸೆ ಅಂಗವಾಗಿ ಉಚಿತ ನೇತ್ರ ತಪಾಸಣಾ ಶಿಬಿರಗಳನ್ನು ಆಯೋಜಿಸಲಾಗಿದೆ.2024–25ನೇ ಸಾಲಿನಲ್ಲಿ ಹಿರಿಯ ನಾಗರಿಕರ ಕಣ್ಣಿನ ಸ್ವಾಸ್ಥ್ಯಕ್ಕಾಗಿ ಕಣ್ಣಿನ ಪೊರೆ ಶಸಚಿಕಿತ್ಸೆ ವಿಶೇಷ ಅಭಿಯಾನ ಯೋಜನೆಯನ್ನು ಆರೋಗ್ಯ ಇಲಾಖೆ ಸಮನ್ವಯದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಇದೇ ಫೆ.24ರಂದು ಹೊಳಲ್ಕೆರೆ ಪಟ್ಟಣದ ಸಂವಿಧಾನದ ಸೌಧ ಪಕ್ಕದ ಉರ್ದು ಶಾಲೆ ಹತ್ತಿರದ ಗುರುಭವನ, ಫೆ.25ರಂದು ಹೊಸದುರ್ಗ ತಾಲ್ಲೂಕು ಆಸ್ಪತ್ರೆ, ಫೆ.28ರಂದು ಮೊಳಕಾಲ್ಮುರು ಪಟ್ಟಣದ ಸರ್ಕಾರಿ ಕ್ಷೇತ್ರ ಮಾದರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆ, ಮಾರ್ಚ್ 01ರಂದು ಚಳ್ಳಕೆರೆ ತಾಲ್ಲೂಕು ಪಂಚಾಯಿತಿ ಎದುರಿನ ಸರ್ಕಾರಿ ನೌಕರರ ಸಂಘದ ಸಭಾಂಗಣ, ಮಾರ್ಚ್ 03ರಂದು ಚಿತ್ರದುರ್ಗ ಬುದ್ಧನಗರದ ಒನಕೆ ಓಬವ್ವ ಸ್ಟೇಡಿಯಂ ಹತ್ತಿರದ ಜಿಲ್ಲಾ ಬಾಲಭವನ ಆವರಣದ ಜಿಲ್ಲಾ ಬಾಲಭವನ ಸಭಾಂಗಣ, ಮಾರ್ಚ್ 05ರಂದು ಹಿರಿಯೂರು ನೆಹರು ಮೈದಾನದ ಎ.ಕೃಷ್ಣಪ್ಪ ರೋಟರಿ ಸಭಾ ಭವನದಲ್ಲಿ ಹಿರಿಯ ನಾಗಕರಿಗೆ ಉಚಿತ ನೇತ್ರ ತಪಾಸಣಾ ಶಿಬಿರ ನಡೆಯಲಿದೆ. ಶಿಬಿರವು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2.30 ರವರೆಗೆ ನಡೆಯಲಿದೆ. ತಪಾಸಣಾ ಶಿಬಿರಕ್ಕೆ ಹಾಜರಾಗುವ ಹಿರಿಯ ನಾಗರಿಕರು ವಯಸ್ಸಿನ ಸಂಬಂಧ ಹಿರಿಯ ನಾಗರಿಕರ ಗುರುತಿನ ಚೀಟಿ, ಪಾನ್ ಕಾರ್ಡ್, ಆಧಾರ್ ಕಾರ್ಡ್. ಚುನಾವಣಾ ಗುರುತಿನ ಚೀಟಿ, ಜನನಪ್ರಮಾಣಪತ್ರ,ಶಾಲಾ–ಕಾಲೇಜು ದಾಖಲಾತಿ ಸೇರಿದಂತೆ ಜನ್ಮ ದಿನಾಂಕ ನಮೂದಾಗಿರುವ ದಾಖಲಾತಿ ಪ್ರತಿ, ಆಧಾರ್ ಕಾರ್ಡ್, ಬಿಪಿಎಲ್ ಪಡಿತರ ಚೀಟಿಯೊಂದಿಗೆ ಹಾಜರಾಗಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

# ಮೈಕ್ರೋ ಫೈನಾನ್ಸ್ ಹಾವಳಿ ತಡೆಗೆ ಆಧ್ಯಾದೇಶ ಜಾರಿಗೆ ಸಂಸ್ಥೆಗಳು, ಡಿಸಿ ಕಚೇರಿಯಲ್ಲಿ ನೊಂದಣಿ ಕಡ್ಡಾಯ





» ಚಿತ್ರದುರ್ಗ

ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾಲಗಾರರಿಗೆನೀಡುತ್ತಿದ್ದ ಕಿರುಕುಳದಂತಹ ಹಾವಳಿ ತಡೆಗಟ್ಟಲು ಸರ್ಕಾರ ಸುಗ್ರೀವಾಜ್ಞೆ ಮೂಲಕ ಆಧ್ಯಾದೇಶ ಜಾರಿಗೊಳಿಸಿದ್ದು, ಇದರ ಅನ್ವಯ ಎಲ್ಲ ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಲೇವಾದೇವಿ ಸಂಸ್ಥೆಗಳು 30 ದಿನಗಳ ಒಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕಡ್ಡಾಯವಾಗಿ ನೊಂದಣಿ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಸೂಚನೆ ನೀಡಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಯವರಿಗೆ ಸರ್ಕಾರದ ಸುಗ್ರೀವಾಜ್ಞೆ ಆಧ್ಯಾದೇಶ ಕುರಿತಂತೆ ಮಾಹಿತಿ ಹಾಗೂ ಸೂಚನೆ ನೀಡುವ ಸಲುವಾಗಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕುಳ ಹಾವಳಿಗೆ ರಾಜ್ಯದಲ್ಲಿ ಅನೇಕ ಕುಟುಂಬಗಳು ಸಂಕಷ್ಟವನ್ನು ಅನುಭವಿಸಿದ್ದವು. ಹೀಗಾಗಿ ಇಂತಹ ಕುಟುಂಬಗಳ ರಕ್ಷಣೆಗಾಗಿ ಸರ್ಕಾರ ಸುಗ್ರೀವಾಜ್ಞೆ ಮೂಲಕ ಆಧ್ಯಾದೇಶ ಹೊರಡಿಸಿದ್ದು, ಶೀಘ್ರವೇ ಇದು ಕಾನೂನು ಕೂಡ ಆಗಲಿದೆ. ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಗಿರವಿ, ಲೇವಾದೇವಿ ಸಂಸ್ಥೆಗಳು ಈ ಹಿಂದಿನ ಕಾಯ್ದೆಯಂತೆ ಸಹಕಾರ ಸಂಘಗಳ ಉಪನಿಬಂಧಕರಲ್ಲಿ ನೊಂದಣಿ ಮಾಡಿಕೊಂಡಿದ್ದರೂ ಕೂಡ, ಸರ್ಕಾರದ ಆಧ್ಯಾದೇಶದ ಪ್ರಕಾರ ಎಲ್ಲರೂ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ 30 ದಿನಗಳ ಒಳಗಾಗಿ ನೊಂದಣಿ ಮಾಡಿಕೊಳ್ಳಬೇಕು. ನೊಂದಣಿ ಪರವಾನಿಗೆಯು ಒಂದು ವರ್ಷಕ್ಕೆ ಮಾತ್ರ ಸೀಮಿತವಾಗಿದ್ದು, ನಂತರ ನವೀಕರಣ ಮಾಡಿಕೊಳ್ಳಬೇಕಾಗುತ್ತದೆ. ನೊಂದಣಿ ಮಾಡಿಕೊಳ್ಳದಿರುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ಪೊಲೀಸ್ ಇಲಾಖೆ ಕೂಡ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಂಡು, ಸಂಸ್ಥೆಯಲ್ಲಿ ತನಿಖೆ ನಡೆಸಬಹುದಾಗಿದೆ. ಸಾಲಗಾರರು ಹಾಗೂ ಸಾಲ ನೀಡುವ ಸಂಸ್ಥೆಯ ನಡುವೆ ನಡೆಯುವ ಒಪ್ಪಂದವು ಸಂಪೂರ್ಣವಾಗಿ ಕನ್ನಡ ಭಾಷೆಯಲ್ಲಿ ಇರಬೇಕು. ಸಾಲ ನೀಡಿಕೆ, ವಸೂಲಾತಿ ವಿವರ, ಸಾಲಕ್ಕೆ ವಿಧಿಸಲಾಗುವ ಬಡ್ಡಿದರ, ಕಂತುಗಳ ವಿವರ, ಮರುಪಾವತಿ ತೀರುವಳಿ ಸೇರಿದಂತೆ ಯಾವುದೇ ಷರತ್ತು, ನಿಬಂಧನೆಗಳನ್ನು ಮುಚ್ಚಿಡದೆ, ಎಲ್ಲ ಅಂಶಗಳನ್ನು ಸ್ಪಷ್ಟವಾಗಿ ಉಲ್ಲೇಖಿಸಿರಬೇಕು. ಬಲವಂತದ ವಸೂಲಾತಿ ಹಾಗೂ ನಿಯಮ ಉಲ್ಲಂಘನೆ ಮಾಡುವುದು ಕ್ರಿಮಿನಲ್ ಅಪರಾಧವಾಗಿದ್ದು, ಜಾಮೀನು ರಹಿತ ಬಂಧನ ಆಗಲಿದೆ. ಅಪರಾಧಕ್ಕೆ 10 ವರ್ಷಗಳ ಜೈಲು ಶಿಕ್ಷೆ ಹಾಗೂ 05 ಲಕ್ಷ ರೂ. ವರೆಗೆ ದಂಡ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಚಿನ್ನ, ಸಾಲ ಪಡೆದವರ ಸರ್ಕಾರಿ ದಾಖಲೆಗಳು, ಆಸ್ತಿಪತ್ರಗಳನ್ನು ಅಡಮಾನವಾಗಿ ಇರಿಸಿಕೊಳ್ಳುವಂತಿಲ್ಲ. ಒಂದು ವೇಳೆ ಇರಿಸಿಕೊಂಡಿದ್ದರೆ, ಅದನ್ನು ಸಂಬಂಧಪಟ್ಟವರಿಗೆ ಹಿಂದಿರುಗಿಸಬೇಕು. ರಾಜ್ಯದ ವಿವಿಧ ಪ್ರದೇಶಗಳಲ್ಲಿ ಮುಖ್ಯ ಕಚೇರಿ ಹೊಂದಿರುವಂತಹ ಸಂಸ್ಥೆಗಳು ಕಡ್ಡಾಯವಾಗಿ ಸ್ಥಳೀಯವಾಗಿ ಕಚೇರಿ ಹೊಂದಿದ್ದು, ಸ್ಥಳೀಯವಾಗಿ ನೊಂದಣಿ ಮಾಡಿಕೊಂಡಿರಬೇಕು. ಸಂಸ್ಥೆಗಳು ಪ್ರತಿ ತ್ರೈಮಾಸಿಕ ಹಾಗೂ ವಾರ್ಷಿಕ ವರದಿ ತಖ್ತೆಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು. ತಪ್ಪಿದಲ್ಲಿ 6 ವರ್ಷ ಜೈಲು ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಲು ಅವಕಾಶವಿದೆ. ಸಾಲ ನೀಡಿದ ಸಂಸ್ಥೆಗಳು, ಸಾಲ ಪಡೆದವರಿಂದ ಬಲವಂತದ ಸಾಲ ವಸೂಲಾತಿ ಮಾಡುವುದು, ಮನೆಯ ಕುಟುಂಬ ಸದಸ್ಯರಿಗೆ ಕಿರುಕುಳ ಕೊಡುವುದು, ಅವಹೇಳನಕಾರಿ ಹಾಗೂ ನಿಂದನೆಯ ಮಾತುಗಳನ್ನಾಡುವುದು, ದೈಹಿಕ ಹಲ್ಲೆ, ಹಿಂಸೆ, ದಾಖಲೆ ವಶದಲ್ಲಿಟ್ಟುಕೊಂಡು ಬೆದರಿಕೆ ಕ್ರಮಗಳನ್ನು ಕೈಗೊಳ್ಳುವಂತಿಲ್ಲ. ಇಂತಹ ಯಾವುದೇ ದೂರುಗಳನ್ನು ಪೊಲೀಸ್ ಅವರು ನಿರಾಕರಿಸುವಂತಿಲ್ಲ, ಜೊತೆಗೆ ಇದು ಜಾಮೀನು ರಹಿತ ಅಪರಾಧವೆಂದು ಪರಿಗಣಿಸಲಾಗುತ್ತದೆ. ಇಂತಹ ದೂರುಗಳ ಬಗ್ಗೆ ಡಿವೈಎಸ್‌ಪಿ ವೃಂದ ಮೇಲ್ಪಟ್ಟ ಪೊಲೀಸ್ ಅಧಿಕಾರಿಗಳು ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಳ್ಳಬಹುದಾಗಿದೆ ಎಂದರು.

ನಿಯಮ ದುರುಪಯೋಗ ಸಲ್ಲದು : ಸರ್ಕಾರ ಹೊರಡಿಸಿರುವ ಆಧ್ಯಾದೇಶವನ್ನು ಸಾಲ ಪಡೆದವರು ಕೂಡ ದುರುಪಯೋಗ ಮಾಡಿಕೊಳ್ಳುವಂತಿಲ್ಲ. ಒಂದು ವೇಳೆ ಇಂತಹ ಯಾವುದೇ ದೂರುಗಳ ವಿಚಾರಣೆಗಾಗಿ ಅಪರ ಜಿಲ್ಲಾಧಿಕಾರಿಗಳನ್ನು ಓಂಬುಡ್ಸ್‌ಮನ್ ಆಗಿ ನೇಮಿಸಲಾಗಿದ್ದು, ಪ್ರಕರಣದ ವಿಚಾರಣೆಯನ್ನು ನಡೆಸಿ, ಇವರ ವರದಿಯ ಆಧಾರದಲ್ಲಿ ತಪ್ಪಿತಸ್ಥರ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದ ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆಯಲ್ಲಿ ಇಂತಹ ಯಾವುದೇ ದೂರುಗಳು ಇದುವರೆಗೂ ಬಂದಿಲ್ಲ, ಆದಾಗ್ಯೂ ಯಾರೂ ಕೂಡ ನಿಯಮಗಳನ್ನು ಉಲ್ಲಂಘಿಸದೆ, ಕಾನೂನು ಕ್ರಮಗಳಿಗೆ ಅವಕಾಶ ಮಾಡಿಕೊಡದೆ, ಸುಗಮವಾಗಿ, ಕ್ರಮಬದ್ಧವಾಗಿ ಹಣಕಾಸಿನ ವ್ಯವಹಾರಗಳನ್ನು ಮುಂದುವರೆಸಿಕೊಂಡು ಹೋಗಬೇಕು ಎಂದು ಮನವಿ ಮಾಡಿದರು.

ಸಹಾಯವಾಣಿ ಶೀಘ್ರ ಪ್ರಾರಂಭ : ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಹಾವಳಿ ತಡೆಗೆ ಸರ್ಕಾರ ಹೊರಡಿಸಿರುವ ಆಧ್ಯಾದೇಶ ಕುರಿತಂತೆ, ಸಾಲ ನೀಡಿಕೆ, ಸಾಲ ವಸೂಲಿ ಮಾಡುವ ಕಾರ್ಯಗಳ ಬಗ್ಗೆ ಯಾವುದೇ ದೂರು ಅಥವಾ ಗೊಂದಲಗಳಿಗೆ ಸ್ಪಂದಿಸಲು ಅನುಕೂಲವಾಗುವಂತೆ ಪ್ರತಿ ತಾಲ್ಲೂಕು ಮಟ್ಟದಲ್ಲಿ ಶೀಘ್ರವೇ ಸಹಾಯವಾಣಿ ಪ್ರಾರಂಭಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಸಂಸ್ಥೆಗಳು ಸಾಲ ವಸೂಲಾತಿಗಾಗಿ ನೇಮಿಸಿಕೊಳ್ಳುವ ಸಿಬ್ಬಂದಿಗಳು, ಏಜೆನ್ಸಿಗಳ ಅಪರಾಧ ಹಿನ್ನಲೆಯನ್ನು ಪೊಲೀಸ್ ಇಲಾಖೆಯಿಂದ ಪರಿಶೀಲಿಸಿಕೊಂಡು, ಬಳಿಕವೇ ನೇಮಿಸಿಕೊಳ್ಳಬೇಕು. ಈಗಾಗಲೆ ನೇಮಕ ಮಾಡಿಕೊಂಡಿರುವವರ ಅಪರಾಧ ಹಿನ್ನಲೆಯನ್ನು ಕೂಡ ಪರಿಶೀಲಿಸಿಕೊಳ್ಳಬೇಕು. ಕ್ರಿಮಿನಲ್ ಹಿನ್ನಲೆ ಹೊಂದಿರುವವರು, ಗೂಂಡಾಗಳನ್ನು ನೇಮಿಸಿಕೊಂಡಿದ್ದಲ್ಲಿ, ಸಂಬಂಧಪಟ್ಟ ಸಂಸ್ಥೆ ಕೂಡ ಇದರ ಕಠಿಣ ಪರಿಣಾಮವನ್ನು ಎದುರಿಸಬೇಕಾಗುತ್ತದೆ. ಹೀಗಾಗಿ ಯಾವುದೇ ಹಣಕಾಸು ಸಂಸ್ಥೆಗಳು ಪ್ರಕರಣ ದಾಖಲಿಸಿಕೊಳ್ಳುವ ರೀತಿ ಮಾಡಿಕೊಳ್ಳದೆ, ನಿಯಮಬದ್ಧವಾಗಿ ಹಣಕಾಸು ವ್ಯವಹಾರ ಮಾಡಿಕೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಡಿವೈಎಸ್‌ಪಿ ದಿನಕರ್, ಸಹಕಾರ ಸಂಘಗಳ ಉಪನಿಬಂಧಕ ದಿಲೀಪ್, ಲೀಡ್ ಬ್ಯಾಂಕ್ ಮ್ಯಾನೇಜರ್ ಕುಮಾರ್ ಉಪಸ್ಥಿತರಿದ್ದರು. ಜಿಲ್ಲೆಯ ಹಲವು ಮೈಕ್ರೋ ಫೈನಾನ್ಸ್, ಗಿರವಿ ಲೇವಾದೇವಿ ಸಂಸ್ಥೆಗಳ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

### ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯಲ್ಲಿ ಉಪವಿಭಾಗಾಧಿಕಾರಿ ಡಾ.ವೆಂಕಟೇಶ್ ನಾಯ್ಕ್ ಅಭಿಮತ

# ಉತ್ತಮ ಆಡಳಿತ ವ್ಯವಸ್ಥೆ ರೂಪಿಸಿದ್ದ ಶಿವಾಜಿ



» ಚಿತ್ರದುರ್ಗ

ಛತ್ರಪತಿ ಶಿವಾಜಿ ಮಹಾರಾಜರು ಉತ್ತಮ ಆಡಳಿತ ಸುಧಾರಣಾ ನೀತಿಗಳನ್ನು ಜಾರಿಗೊಳಿಸುವ ಮೂಲಕ ಶ್ರೇಷ್ಠ ಆಡಳಿತಗಾರರಾಗಿದ್ದರು ಎಂದು ಉಪವಿಭಾಗಾಧಿಕಾರಿ ಡಾ.ವೆಂಕಟೇಶ್ ನಾಯ್ಕ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ ಸಮಾರಂಭದಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಶಿವಾಜಿ ಮಹಾರಾಜರ ಆಡಳಿತ ವ್ಯವಸ್ಥೆ ಬಹಳ ಪರಿಣಾಮಕಾರಿಯಾಗಿತ್ತು. ರಾಷ್ಟ್ರನಿರ್ಮಾಣ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಹಿಂದೂ ಧರ್ಮದ ಪರವಾಗಿ, ಸಮುದಾಯದ ರಕ್ಷಣೆಗಾಗಿ ಹೋರಾಡಿದ ಮಹನೀಯರು ಎಂದು ಹೇಳಿದರು.ಶಿವಾಜಿ ಅವರು ತಾಯಿಗೆ ತಕ್ಕ ಮಗ, ಗುರುವಿಗೆ ತಕ್ಕ ಶಿಷ್ಯರಾಗಿ ತಮ್ಮ ಇಡೀ ಜೀವನವನ್ನು ಬಹಳ ಅರ್ಥಪೂರ್ಣವಾಗಿ ಬದುಕಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ. ಉತ್ತಮ ಹೋರಾಟಗಾರರಾಗಿದ್ದ ಶಿವಾಜಿ ಮಹಾರಾಜರು ಸಮಾಜಮುಖಿಯಾಗಿ, ರಾಷ್ಟ್ರ ನಿರ್ಮಾಣ ಹಾಗೂ ಸಮಾಜದ ಪರವಾಗಿ ಹೋರಾಡಿದ ರಾಜರಿಗೆ ರಾಜರಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಿವಾಜಿ ಮಹಾರಾಜರ ತತ್ವಾದರ್ಶ, ಸಿದ್ಧಾಂತ, ಹೋರಾಟದ ಗುಣಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು, ಅವರ ಕೊಡುಗೆಗಳನ್ನು ಸ್ಮರಿಸುತ್ತಾ, ಅವುಗಳನ್ನು ನಮ್ಮ ಮಕ್ಕಳಿಗೆ, ಮುಂದಿನ ಪೀಳಿಗೆಗೆ ಕೊಂಡ್ಯೊಯುವ ಕೆಲಸ ಮಾಡೋಣ ಎಂದು ಹೇಳಿದರು.

ಚಿತ್ರದುರ್ಗ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಧ್ಯಾಪಕ ಡಾ.ಸಿ.ಚನ್ನಕೇಶವ ಮಾತನಾಡಿ, ಮಹನೀಯರ ಜಯಂತಿ ಜಾತಿಗೆ ಸೀಮಿತವಲ್ಲ. ಜಾತಿಯನ್ನು ದೂರ ಮಾಡಿ ಮಹನೀಯರ ವ್ಯಕ್ತಿತ್ವನ್ನು, ಗುಣ, ತತ್ವಾದರ್ಶಗಳನ್ನು ತಿಳಿದುಕೊಳ್ಳಬೇಕು ಎಂಬ ಸದುದ್ದೇಶದಿಂದ ಮಹನೀಯರ ಜಯಂತಿಗಳನ್ನು ಆಚರಿಸಲಾಗುತ್ತಿದ್ದು, ಜಾತಿಯನ್ನು ಮೀರಿ ಜಯಂತಿ ಆಚರಣೆ ಮಾಡಬೇಕಿದೆ. ಆಗ ಮಾತ್ರ ಮಹನೀಯರ ಜಯಂತಿ ಅರ್ಥಪೂರ್ಣವಾಗಲಿದೆ ಎಂದು ಅಭಿಪ್ರಾಯಪಟ್ಟರು.

16–17ನೇ ಶತಮಾನದಲ್ಲಿ ಜನಿಸಿದ ಛತ್ರಪತಿ ಶಿವಾಜಿ ಅವರು ಪ್ರಸ್ತುತ 21ನೇ ಶತಮಾನದಲ್ಲಿಯೂ ಸಹ ಅವರ ಜಯಂತಿ ಅಚರಿಸುತ್ತೇವೆ ಎಂದರೆ ಶಿವಾಜಿ ಮಹಾರಾಜರು ಮಾಡಿದ ತ್ಯಾಗ, ಬಲಿದಾನ, ಶೌರ್ಯ ನೆನಪಿಸಿಕೊಳ್ಳಬೇಕಿದೆ. ಮರಾಠ ಸಾಮ್ರಾಜ್ಯದ ಸಂಸ್ಥಾಪಕ, ಹಿಂದೂ ಧರ್ಮದ ರಕ್ಷಕ ಶಿವಾಜಿ ಅವರು ಕಷ್ಟದಲ್ಲಿರುವ ಜನರ ಕಲ್ಯಾಣಕ್ಕಾಗಿ ಬದುಕಿ ಬಂದ ಮಹಾನ್ ವ್ಯಕ್ತಿ ಶಿವಾಜಿ ಎಂದರೆ ತಪ್ಪಾಗಲಾರದು ಎಂದು ಹೇಳಿದರು.

ಶಿವಾಜಿ ತಾಯಿ ಜೀಜಾಬಾಯಿ ಅವರು ಸದ್ಗುಣ ಸಂಪನ್ನ ಮಹಿಳೆ. ದೈವಭಕ್ತೆ, ವಿದ್ಯಾವಂತೆ ಹಾಗೂ ಆಳವಾದ ಧಾರ್ಮಿಕ ಮತ್ತು ಮಹತ್ವಾಕಾಂಕ್ಷೆಯ ಮಹಿಳೆಯಾಗಿದ್ದು, ಶಿವಾಜಿಯ ಮೇಲೆ ಗಾಢವಾದ ಪ್ರಭಾವ ಬೀರಿದಳು. ಶಿವಾಜಿಗೆ ಚಿಕ್ಕ ವಯಸ್ಸಿನಲ್ಲಿ ರಾಮಾಯಣ, ಮಹಾಭಾರತದ ಕಥೆಗಳನ್ನು, ಪುರಾಣಗಳನ್ನು ಹೇಳುತ್ತಾ ಅವನಲ್ಲಿ ಉದಾತ್ತ ಆದರ್ಶಗಳನ್ನು ಬಿತ್ತಿದಳು. ಹಿಂದೂ ಧರ್ಮ ಹಾಗೂ ಸಂಸ್ಕೃತಿಯ ಬಗ್ಗೆ ಅಭಿಮಾನ ಮೂಡಿಸಿದಳು. ಎಂ.ಜಿ. ರಾನಡೆಯವರ ಪ್ರಕಾರ ಮಹಾಪುರುಷರ ಜೀವನ ರೂಪಿಸುವಲ್ಲಿ ತಾಯಿಯವರ ಪಾತ್ರಅಧಿಕವಾಗಿದ್ದಲ್ಲಿ,ಶಿವಾಜಿಯ ಜೀವನ ರೂಪಿಸುವಲ್ಲಿ ಜೀಜಾಬಾಯಿಯವರ ಪಾತ್ರ ಹಿರಿದಾದುದು' ಎಂದು ಹೇಳಿದ್ದಾರೆ ಎಂದರು.

ಗ್ರಾಂಟ್ ಡಫ್ ಎಂಬುವವು ಬರೆದಂತೆ "ಶಿವಾಜಿಯ ಧೈರ್ಯ, ಸಾಹಸ ಪ್ರವೃತ್ತಿ, ಅನನ್ಯ ರಾಷ್ಟ್ರಪ್ರೇಮ, ಹಿಂದೂ ಸಂಸ್ಕೃತಿಯ ರಕ್ಷಕನಾಗಿ, ಹಿಂದೂಗಳ ಅವತಾರ ಪುರುಷನಾಗಿ ಅವನ ಚರಿತ್ರೆಯು ಹಿಂದೂಗಳಿಗೆ ಒಂದು ವೀರ ಕಾವ್ಯವಾಗಿದೆ ಎಂದು ಬಣ್ಣಿಸಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ಚಿತ್ರದುರ್ಗ ಮರಾಠ ವಿದ್ಯಾವರ್ಧಕ ಸಂಘ ಅಧ್ಯಕ್ಷ ಸುರೇಶ್ ರಾವ್ ಜಾದವ್, ಕಾರ್ಯದರ್ಶಿ ಜೆ.ಗೋಪಾಲರಾವ್ ಜಾದವ್, ಜೀಜಾಮಾತಾ ಮಹಿಳಾ ಮಂಡಳಿ ಜೆ.ಉಷಾಬಾಯಿ ಜಾದವ್, ಕಾರ್ಯದರ್ಶಿ ಶಾರದಾ ಬಾಯಿ ಸೇರಿದಂತೆ ಮರಾಠ ಸಮಾಜದ ಮುಖಂಡರು ಇದ್ದರು. ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ನಿರೂಪಿಸಿದರು. ತ್ರಿವೇಣಿ ಮತ್ತು ಸಂಗಡಿಗರು ಗೀತಗಾಯನ ನಡೆಸಿಕೊಟ್ಟರು.

## ಫಾಸ್ಟ್ ನ್ಯೂಸ್

### ಗಾಂಜಾ ಸೊಪ್ಪು ಗಿಡಗಳ ಬೆಳೆದ ವ್ಯಕ್ತಿಗೆ ಶಿಕ್ಷೆ

» ಚಿತ್ರದುರ್ಗ

ಮನೆಯ ಹಿತ್ತಲಿನಲ್ಲಿ ಅಕ್ರಮವಾಗಿ ಗಾಂಜಾ ಸೊಪ್ಪು ಗಿಡಗಳನ್ನು ಬೆಳೆದ ಇಬ್ಬರು ಆರೋಪಿಗಳಿಗೆ ಚಿತ್ರದುರ್ಗದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಹೊಸದುರ್ಗ ತಾಲ್ಲೂಕಿನ ಮತ್ತೋಡು ಹೋಬಳಿಯ ಹೊಸೂರು ಭೋವಿಹಟ್ಟಿ ಗ್ರಾಮದಲ್ಲಿ ಆರೋಪಿತರಾದ ಯಲ್ಲಪ್ಪ ತಂದೆ ತಿಮ್ಮಾಭೋವಿ ಮತ್ತು ಚಂದ್ರಮ್ಮ ಕೋಂ ಗೋವಿಂದಪ್ಪ ಅವರು ತಮ್ಮ ಮನೆಯ ಹಿತ್ತಲಿನಲ್ಲಿ ಮಾದಕ ವಸ್ತುವಾದ 8 ಕೆ.ಜಿ. 500 ಗ್ರಾಂ ತೂಕವಿರುವ ಹೂವು, ಬೀಜ ಹಾಗೂ ಕಾಂಡದಿಂದ ಕೂಡಿದ ಘಾಟು ವಾಸನೆಯುಳ್ಳ ಗಾಂಜಾ ಸೊಪ್ಪನ್ನು ಬೆಳೆಸಿರುವುದರ ಬಗ್ಗೆ ಮಾಹಿತಿ ಪಡೆದು, ಹೊಸದುರ್ಗದ ಅಬಕಾರಿ ಉಪನಿರೀಕ್ಷಕ ಎ.ಜೆ. ನಾಗರಾಜ ಅವರು ಗಾಂಜಾ ಸೊಪ್ಪು ವಶಕ್ಕೆ ಪಡೆದು, ಎನ್‌.ಡಿ.ಪಿ.ಎಸ್. ಕಾಯ್ದೆಯಡಿ ಪ್ರಕರಣ ದಾಖಲಿಸಿ, ತನಿಖೆಯ ನಂತರ ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ ಅವರು ಕಲಂ: 20(ಎ)(ಐ) ಎನ್‌.ಡಿ.ಪಿ.ಎಸ್. ಆಕ್ಟ್ ನಡಿ ಆರೋಪಿತರಾದ ಯಲ್ಲಪ್ಪ ಅವರಿಗೆ 3 ವರ್ಷ ಕಠಿಣ ಶಿಕ್ಷೆ ಹಾಗೂ 30 ಸಾವಿರ ರೂ. ದಂಡ ಹಾಗೂ ಎರಡನೆ ಆರೋಪಿಯಾದ ಚಂದ್ರಮ್ಮ ಅವರಿಗೆ 2 ವರ್ಷ ಕಠಿಣ ಶಿಕ್ಷೆ ಹಾಗೂ 20 ಸಾವಿರ ರೂ. ದಂಡ ವಿಧಿಸಿ ಬುಧವಾರದಂದು ತೀರ್ಪು ನೀಡಿದ್ದಾರೆ. ಪ್ರಧಾನ ಸರ್ಕಾರಿ ಅಭಿಯೋಜಕರಾದ ಬಿ. ಗಣೇಶ ನಾಯ್ಕ ಅವರು ವಿಚಾರಣೆ ನಡೆಸಿ, ಸರ್ಕಾರದ ಪರ ವಾದ ಮಂಡಿಸಿದ್ದರು.

### ಹಿರಿಯೂರು: ಫೆ. 20 ರಂದು ವಿವಿಧ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಹಿರಿಯೂರಿನ 220 ಕೆಎಸ್‌ಆರ್‌ಎಸ್, 66/11 ಕೆ.ವಿ. ಭರಂಗಿರಿ, ಹಿಂಡಸಘಟ್ಟ, ಕಲಮರನಹಳ್ಳಿ, ಹರಿಯಬ್ಬೆ, ಕೆ.ಆರ್.ಹಳ್ಳಿ, ಪಿ.ಡಿ. ಕೋಟೆ ವಿದ್ಯುತ್ ಉಪಕೇಂದ್ರಗಳಲ್ಲಿ ಫೆ. 20 ರಂದುನಿರ್ವಹಣಾ ಕಾಮಗಾರಿ ಕೈಗೊಂಡಿರುವ ಕಾರಣ, ಈ ಕೇಂದ್ರಗಳಿಂದ ವಿದ್ಯುತ್ ಸಂಪರ್ಕ ವ್ಯವಸ್ಥೆ ಇರುವ ವಿವಿಧ ಗ್ರಾಮಗಳಲ್ಲಿ ಅಂದು ಬೆಳಿಗ್ಗೆ 10 ರಿಂದ ಸಂಜೆ 05 ರವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಹಿರಿಯೂರಿನ 220 ಕೆಎಸ್‌ಆರ್‌ಎಸ್, 66/11 ಕೆ.ವಿ. ಭರಂಗಿರಿ, ಹಿಂಡಸಘಟ್ಟ, ಕಲಮರನಹಳ್ಳಿ, ಹರಿಯಬ್ಬೆ, ಕೆ.ಆರ್. ಹಳ್ಳಿ, ಪಿ.ಡಿ. ಕೋಟೆ ವಿದ್ಯುತ್ ಉಪಕೇಂದ್ರಗಳಲ್ಲಿ ಫೆ. 20 ರಂದುನಿರ್ವಹಣಾ ಕಾಮಗಾರಿ ಕೈಗೊಂಡಿರುವ ಕಾರಣ, ಈ ಕೇಂದ್ರಗಳಿಂದ ವಿದ್ಯುತ್ ಸಂಪರ್ಕ ಪಡೆದುಕೊಂಡಿರುವ ಹಿರಿಯೂರು ಗ್ರಾಮೀಣದ ಕೈಗಾರಿಕಾ ಪ್ರದೇಶಗಳಾದ ಅಕ್ಷಯ ಫುಡ್ ಪಾರ್ಕ್, ಹಬೀಬ್ ಸಾಲ್ವೆಂಟ್, ನಂದಶ್ರೀ, ಬಿ.ಜಿ.ಸಿ.ಎಲ್., ವಿ.ವಿ. ಕ್ರಾಸ್, ಲಕ್ಕವ್ವನಹಳ್ಳಿ, ದೊಡ್ಡಘಟ್ಟ, ಸೀಗೇಹಟ್ಟಿ, ಕೂನಿಕೆರೆ, ಬಬ್ಬೂರು, ತೋಟಗಾರಿಕಾ ವಿಶ್ವವಿದ್ಯಾನಿಲಯ, ಆದಿವಾಲ, ಆದಿವಾಲ ಫಾರಂ, ಪಟ್ರೆಹಳ್ಳಿ, ಬುರುಡುಕುಂಟೆ, ಯಳವಾರಹಟ್ಟಿ, ಹೊಸಹಳ್ಳಿ ಗುಳ್ಯಾ, ಗುಳ್ಯಾ ಗೊಲ್ಲರಹಟ್ಟಿ ಹಾಗೂ ಸುತ್ತಮುತ್ತಲಿನ ಗ್ರಾಮಗಳು. ದಿಂಡಾವರ, ಹಿಂಡಸಘಟ್ಟೆ, ಉಡುವಳ್ಳಿ, ಭರಂಗಿರಿ, ಹರಿಹಬ್ಬೆ, ಶ್ರವಣಗೆರೆ, ಬೆನಕನಹಳ್ಳಿ, ಸಕ್ಕರ ಪಿಡಿ ಕೋಟೆ ಹಲಗಲದ್ದಿ, ಮದ್ದಿಹಳ್ಳಿ, ಮದ್ದಿಹಳ್ಳಿ ಗೊಲ್ಲರಹಟ್ಟಿ, ಶಾಂತಿನಗರ, ಖಂಡೇನಹಳ್ಳಿ, ಖಂಡೇನಹಳ್ಳಿ ಪಾಳ್ಯ, ಹೊಸಕೆರೆ, ಹೊಸಕೆರೆ ಪಾಳ್ಯ, ಬೇತೂರು, ಬೇತೂರು ಪಾಳ್ಯ, ಮಾರಮ್ಮನಹಳ್ಳಿ, ಕಣಜನಹಳ್ಳಿ, ಸೂಗೂರು, ಮುಂಸವವಳ್ಳಿ, ಕೃಷ್ಣಗಿರಿ, ವಿ.ಕೆ. ಗುಡ್ಡ, ಚಿಲ್ಲಹಳ್ಳಿ, ಯಶಗೊಂಡನಹಳ್ಳಿ, ಅಬ್ಬಿನಹೊಳೆ, ಈಶ್ವರಗೆರೆ, ಈಶ್ವರಗೆರೆ ಗೊಲ್ಲರಹಟ್ಟಿ, ಹೂವಿನಹೊಳೆ, ದೇವರಕೊಟ್ಟ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಹೀಗಾಗಿ ಗ್ರಾಹಕರು, ರೈತರು, ಸಾರ್ವಜನಿಕರು ಸಹಕರಿಸುವಂತೆ ಹಿರಿಯೂರು ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಚಿತ್ರದುರ್ಗ: ಬಿ-ಖಾತಾ ಪಡೆಯಲು ನಗರಸಭೆ ಸೂಚನೆ

» ಚಿತ್ರದುರ್ಗ

ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರ ಸೂಚನೆಯಂತೆ ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ ಇ–ಆಸ್ತಿ ತಂತ್ರಾಂಶದಲ್ಲಿ ಗಣಕೀಕರಣಗೊಳಿಸಿರುವ ಮತ್ತು ಇದುವರೆವಿಗೂ ಇ–ಆಸ್ತಿ ನಮೂನೆ–3 ಅನ್ನು ಪಡೆಯದಿರುವ ಸ್ವತ್ತುಗಳಿಗೆ ಸಂಬಂಧಪಟ್ಟಂತೆ "ಬಿ"–ಖಾತೆ ನೀಡಲಾಗುತ್ತಿದ್ದು, ಸಂಬಂಧಪಟ್ಟವರು ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಸೂಚನೆ ನೀಡಲಾಗಿದೆ. "ಬಿ" ಖಾತಾ ಪಡೆಯಲು ಚಿತ್ರದುರ್ಗ ನಗರಸಭೆ ವ್ಯಾಪ್ತಿಯ ಆಸ್ತಿ ಮಾಲೀಕರುಗಳಿಗೆ ಸೂಚನೆ ನೀಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ, ವಾಟ್ಸಾಪ್ ನಂ. 9606281164 ಅಥವಾ ಕಚೇರಿ ವೇಳೆಯಲ್ಲಿ ಕಂದಾಯ ವಿಭಾಗದ ಕರವಸೂಲಿಗಾರರು, ಕಂದಾಯ ನಿರೀಕ್ಷಕರು, ಕಂದಾಯಾಧಿಕಾರಿಗಳಿಂದ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ ಎಂದು ನಗರಸಭೆ ಪೌರಾಯುಕ್ತರಾದ ಎಂ. ರೇಣುಕಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಶು, ತಾಯಿ ಮರಣ ಪ್ರಮಾಣ ನಿಯಂತ್ರಣಕ್ಕೆ ಪರಿಣಾಮಕಾರಿ ಯೋಜನೆ ಅಗತ್ಯ: ಜಿಪಂ ಸಿಇಒ

» ಚಿತ್ರದುರ್ಗ

ಜಿಲ್ಲೆಯಲ್ಲಿ ಶಿಶು ಮತ್ತು ತಾಯಿ ಮರಣ ಪ್ರಮಾಣ ನಿಯಂತ್ರಣಕ್ಕೆ ಪರಿಣಾಮಕಾರಿ ಹಾಗೂ ಸೂಕ್ತ ಯೋಜನೆ ರೂಪಿಸುವುದು ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ಕ್ರಮಕ್ಕೆ ಮುಂದಾಗಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಸೂಚನೆ ನೀಡಿದರು.

ನಗರದ ಐಶ್ವರ್ಯ ಫೋರ್ಟ್ ಹೋಟೆಲ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೆಹೆಚ್‌ಪಿಟಿ ಸಹಯೋಗದಲ್ಲಿ ಬುಧವಾರ ಆಯೋಜಿಸಿದ್ದ ಐಸಿಎಂಆರ್ ಪ್ರಾಜೆಕ್ಟ್ ಲಾಂಚ್ ಹಾಗೂ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದು ಮಗುವಿಗೆ ಹುಟ್ಟಿನಿಂದ 1000 ದಿನಗಳ ಜೀವಿತಾವಧಿ ಅತ್ಯಂತ ಪ್ರಮುಖ ಘಟ್ಟವಾಗಿದೆ. ಈ ಅವಧಿಯಲ್ಲಿ ಮಗುವಿನ ದೈಹಿಕ, ಮಾನಸಿಕ ಬೆಳವಣಿಗೆ ಪ್ರಮುಖ ಹಂತ ದಾಟುವುದರಿಂದ, ಮಗುವಿನ ಸಮಗ್ರ ಆರೋಗ್ಯ ಕಾಯ್ದುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಶಿಶು ಮರಣ, ತಾಯಿ ಮರಣ ನಿಯಂತ್ರಣಕ್ಕಾಗಿ ಈಗಾಗಲೆ ಸರ್ಕಾರ ಹಲವಾರು ಕಾರ್ಯಕ್ರಮಗಳು, ಯೋಜನೆಗಳು,ಜಾಗೃತಿಕಾರ್ಯಕ್ರಮಗಳು ಜಾರಿಯಲ್ಲಿದ್ದರೂ, ಇನ್ನೂ ಶಿಶು ಹಾಗೂ ತಾಯಿ ಮರಣಕ್ಕೆ ಪರಿಣಾಮಕಾರಿಯಾಗಿ




ಕಡಿವಾಣ ಹಾಕಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ತಾಯಿ ಮರಣ, ಶಿಶು ಮರಣ ಕುರಿತು ಸಮಗ್ರವಾಗಿ ಚರ್ಚೆಯಾಗಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ ಈಗಾಗಲೆ ಗ್ರಾಮ ಆರೋಗ್ಯ ಕಾರ್ಯಕ್ರಮವಿದೆ. ಉದ್ಯೋಗಖಾತ್ರಿಯೋಜನೆಯಲ್ಲಿಮಹಿಳಾ ಕೂಲಿ ಕಾರ್ಮಿಕರ ಮಕ್ಕಳ ಹಿತಕಾಯಲು ಕೂಸಿನ ಮನೆ ಯೋಜನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೂರಕ ಪೌಷ್ಠಿಕ ಆಹಾರ, ಅಪೌಷ್ಠಿಕತೆ ನಿವಾರಣೆ ಕಾರ್ಯಕ್ರಮಗಳು ಕೂಡ ಜಾರಿಯಲ್ಲಿವೆ. ಆರೋಗ್ಯ ಇಲಾಖೆಯಲ್ಲಿಯೂ ಕೂಡ ಹಲವಾರು ಯೋಜನೆಗಳು ಜಾರಿಯಲ್ಲಿವೆ. ಆದಾಗ್ಯೂ ಶಿಶು ಮರಣ, ತಾಯಿ ಮರಣ ಸಂಭವಿಸುವುದು ತಪ್ಪಿಲ್ಲ. ಅಪೌಷ್ಠಿಕ ಮಕ್ಕಳು, ಬೆಳವಣಿಗೆಯಲ್ಲಿ ಕುಂಠಿತ ಇರುವ ಮಕ್ಕಳು, ಕಡಿಮೆ ತೂಕದ ಮಕ್ಕಳು ಜಿಲ್ಲೆಯ ಎಲ್ಲೆಡೆ ಪತ್ತೆಯಾಗುತ್ತಾರೆ. ಹೀಗಾಗಿ ವ್ಯವಸ್ಥೆ ಹಾಗೂ ಯೋಜನೆಗಳ ಪರಿಣಾಮಕಾರಿ ಜಾರಿಯಲ್ಲಿನ ಲೋಪದೋಷಗಳನ್ನು ಪತ್ತೆ ಮಾಡುವ ಕಾರ್ಯ ಆಗಬೇಕಿದೆ. ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮಟ್ಟದಲ್ಲಿ ಯೋಜನೆಗಳ ಗ್ರೌಂಡ್‌ಲೆವೆಲ್ ಫೀಡ್ ಬ್ಯಾಕ್ ಪಡೆಯುವುದು ಅಗತ್ಯವಾಗಿದೆ. ಇದರಿಂದಾಗಿ ಪರಿಹಾರ ಯೋಜನೆಗಳನ್ನು ರೂಪಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಕ್ಷೇತ್ರಮಟ್ಟದ ವೈದ್ಯಾಧಿಕಾರಿಗಳು ಈ ತರಬೇತಿಯ ಪ್ರಯೋಜನ ಪಡೆದು ಶಿಶು ಮರಣ ದರ, ತಾಯಿ ಮರಣ ದರ ನಿಯಂತ್ರಿಸಲು ಸೂಕ್ತ ಯೋಜನೆ ತಯಾರಿಸಿ ಎಂದು ಹೇಳಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಮಾತನಾಡಿ, ತಾಯಿ ಮರಣ, ಶಿಶು ಮರಣ ತಪ್ಪಿಸುವುದು, ಗರ್ಭಿಣಿಯರು, ಮಕ್ಕಳಲ್ಲಿನ ರಕ್ತಹೀನತೆ ಮತ್ತು ಅಪೌಷ್ಠಿಕತೆ ತೊಲಗಿಸುವುದು ಆರೋಗ್ಯ ಇಲಾಖೆಯ ಪ್ರಮುಖ ಆದ್ಯತೆ ಆಗಬೇಕು. ಈ ನಿಟ್ಟಿನಲ್ಲಿ ಇಂತಹ ತರಬೇತಿ ಕಾರ್ಯಾಗಾರಗಳು ಉಪಯುಕ್ತವಾಗಿವೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ಪೋಷಣ್ ಅಭಿಯಾನ ಜಾರಿಯಲ್ಲಿದ್ದು, ಅಪೌಷ್ಠಿಕ ಮಕ್ಕಳನ್ನು ಗುರುತಿಸುವ, ಚಿಕಿತ್ಸೆ ಕೊಡಿಸುವ ಕೆಲಸ ನಮ್ಮ ಅಂಗನವಾಡಿ ಕೇಂದ್ರಗಳ ಮೂಲಕ ನಡೆಯುತ್ತಿದೆ. ಆರೋಗ್ಯ ಇಲಾಖೆಯೊಂದಿಗೆ ಎಲ್ಲಾ ಸಹಕಾರ ನೀಡಿ ಮಗುವಿನ ಜೀವಿತದ ಪ್ರಥಮ ಸಾವಿರ ದಿನಗಳನ್ನು ತಾಯಿ ಮಗು ಉಳಿವಿಗಾಗಿ, ತರಬೇತಿಯ ನಂತರ ಕ್ರಿಯಾ ಯೋಜನೆ ತಯಾರಿಸಿ ಒಗ್ಗೂಡಿ ಕೆಲಸ ಮಾಡೋಣ ಎಂದರು.

ಸೆಂಟ್ ಜಾನ್ಸ್ ಆಸ್ಪತ್ರೆಯ ಡಾ.ಸುಮನ ರಾವ್ ಪ್ರಾಸ್ತಾವಿಕವಾಗಿ ಮಾತನಾಡಿ ತರಬೇತಿ ಕಾರ್ಯಗಾರದ ಉದ್ದೇಶ ಮತ್ತು ಇತರೆ ವಿಷಯ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಜಿ.ಪಿ ರೇಣುಪ್ರಸಾದ್, ಸೆಂಟ್ ಜಾನ್ಸ್ ರಿಸರ್ಚ್ ಇನ್ಸಿಟ್ಯೂಟ್ ಕೋ ಡೈರೆಕ್ಟರ್ ಡಾ.ಮರಿಯನ್, ಸೆಂಟ್ ಜಾನ್ಸ್ ಮೆಡಿಕಲ್ ಕಾಲೇಜು ಮುಖಸ್ಥ ಹಾಗೂ ಪ್ರಾಧ್ಯಾಪಕ ಟಿಂಕುಥಾಮಸ್, ಕೆಹೆಚ್‌ಪಿಟಿ ಐಸಿಎಂಆರ್ ಟೆಕ್ನಿಕಲ್ ಲೀಡ್ ಡಾ.ಪ್ರಾರ್ಥನಾ, ಸೀನಿಯರ್ ಮ್ಯಾನೇಜರ್ ಡಾ.ಆಯುಷ, ಐಸಿಎಂಆರ್ ಪ್ರಾಜೆಕ್ಟ್ ಜಿಲ್ಲಾ ಸಂಯೋಜಕಿ ಬಿ.ವೀಣಾ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ್ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳು, ಜಿಲ್ಲಾಸ್ಪತ್ರೆಯ ವೈದ್ಯಾಧಿಕಾರಿಗಳು, ಸಮುದಾಯ ಆರೋಗ್ಯ ಕೇಂದ್ರದ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಅಧಿಕಾರಿಗಳು, ಸೆಂಟ್ ಜಾನ್ಸ್ ಆಸ್ಪತ್ರೆಯ ಸಿಬ್ಬಂದಿಗಳು, ಕೆಹೆಚ್‌ಪಿಟಿ ಸಿಬ್ಬಂದಿಗಳು ಇದ್ದರು.

# ಫೆ.22, 23 ರಂದು ತ.ರಾ.ಸು.ರಂಗಮಂದಿರದಲ್ಲಿ ಪ್ರಥಮ ಬಾರಿಗೆ ಸರಿಗಮ ಸಂಗೀತ ನಾಟಕೋತ್ಸವ

» ಚಿತ್ರದುರ್ಗ

ಗಾನಯೋಗಿಪಂಡಿತಪಂಚಾಕ್ಷರಗವಾಯಿಗಳವರ ಜಯಂತ್ಯೋತ್ಸವ ಅಂಗವಾಗಿ ಫೆ.22 ಮತ್ತು 23 ರಂದು ತ.ರಾ.ಸು.ರಂಗಮಂದಿರದಲ್ಲಿ ಪ್ರಥಮ ಬಾರಿಗೆ

ಕುಮಾರೇಶ್ವರ ಕೃಪಾ ಪೋಷಿತ ಪಂಡಿತ ಪಂಚಾಕ್ಷರ ಗವಾಯಿಗಳವರ ನಾಟ್ಯ ಸಂಘ ಗದಗ ವತಿಯಿಂದ ಸರಿಗಮ ಸಂಗೀತ ನಾಟಕೋತ್ಸವ ನಡೆಯಲಿದೆ ಎಂದು ನಾಟಕೋತ್ಸವ ಸಮಿತಿ ಕಾರ್ಯದರ್ಶಿ ಸುಜೀತ ಕುಲಕರ್ಣಿ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ನಮ್ಮ ಸಂಸ್ಥೆ ಆರಂಭವಾಗಿ ನಾಲ್ಕು ವರ್ಷಗಳಾಗಿದೆ. ತಬಲ, ವಾದ್ಯ, ಹಾರ್ಮೋನಿಯಂ ಕಲಿಸುತ್ತಿದ್ದೇವೆ. ನಾಟಕದಲ್ಲಿ ಸ್ತ್ರೀ ಪಾತ್ರವನ್ನು ಪುರುಷರು ಅಭಿನಯಿಸುತ್ತಿರುವುದು ವಿಶೇಷ. ಮೊದಲ ದಿನ ಹೇಮರಡ್ಡಿ ಮಲ್ಲಮ್ಮ, ಎರಡನೆ ದಿನ ಅಕ್ಕ ಅಂಗಾರ ತಂಗಿ ಬಂಗಾರ ನಾಟಕ ಸಂಜೆ ಪ್ರದರ್ಶನಗೊಳ್ಳಲಿದೆ ಎಂದು ಹೇಳಿದರು.

ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಸಭಾ ಕಾರ್ಯಕ್ರಮದ ಸಾನಿಧ್ಯ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಶಾಸಕ



ಕೆ.ಸಿ.ವೀರೇಂದ್ರಪಪ್ಪಿ, ರಂಗಕರ್ಮಿ ರಾಜ್ಯ ಪ್ರಶಸ್ತಿ ಪುರಸ್ಕೃತ ಕೆ.ಪಿ.ಭೂತಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ್, ಉದ್ಯಮಿ ಸೈಟ್ ಬಾಬಣ್ಣ ಇವರುಗಳು ಭಾಗವಹಿಸಲಿದ್ದಾರೆಂದರು.

ಸಮಾರೋಪ ಸಮಾರಂಭದ ಸಾನಿಧ್ಯವನ್ನು ಮುರುಘರಾಜೇಂದ್ರ ಬೃಹನ್ಮಠದ ಡಾ.ಬಸವಕುಮಾರ ಮಹಾಸ್ವಾಮೀಜಿ ವಹಿಸಲಿದ್ದಾರೆ. ಸಂಗೀತದ ಆಸಕ್ತಿಯುಳ್ಳವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಂಗೀತ ನಾಟಕೋತ್ಸವ ಯಶಸ್ವಿಗೊಳಿಸುವಂತೆ ಸುಜೀತ ಕುಲಕರ್ಣಿ ಮನವಿ ಮಾಡಿದರು.

ಸರಿಗಮ ಸಂಗೀತ ನಾಟಕೋತ್ಸವ ಸಮಿತಿ ಅಧ್ಯಕ್ಷ ಸತ್ಯನಾರಾಯಣರೆಡ್ಡಿ ಮಾತನಾಡಿ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಎರಡು ನಾಟಕಗಳು ಪ್ರದರ್ಶನಗೊಳ್ಳಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ರಂಗಾಸಕ್ತರು ವೀಕ್ಷಿಸಿ ಕಲಾವಿದರನ್ನು ಪ್ರೋತ್ಸಾಹಿಸಿ ಕಲೆಯನ್ನು ಉಳಿಸಿ ಬೆಳೆಸುವಂತೆ ವಿನಂತಿಸಿದರು.

ಸರಿಗಮ ಸಂಗೀತ ನಾಟಕೋತ್ಸವ ಸಮಿತಿ ಉಪಾಧ್ಯಕ್ಷೆ ಡಾ.ಭವ್ಯರಾಣಿ ಟಿ. ಮಂಜುನಾಥ್ ಸಿ. ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಮದಕರಿಪುರದಲ್ಲಿ ಸೇವಾಲಾಲ್ ಮರಿಯಮ್ಮ ಜಾತ್ರೆಗೆ ನ್ಯಾಯಾಧೀಶ ವೆಂಕಟೇಶ್‌ನಾಯ್ಕರಿಂದ ಚಾಲನೆ



» ಚಿತ್ರದುರ್ಗ

ನಾಲ್ಕು ವರ್ಷಗಳಿಗೊಮ್ಮೆ ಮದಕರಿಪುರದಲ್ಲಿ ನಡೆಯುವ ಸೇವಾಲಾಲ್ ಮರಿಯಮ್ಮ ಜಾತ್ರೆಗೆ ಹೈಕೋರ್ಟ್ ನ್ಯಾಯಾಧೀಶರಾದ ವೆಂಕಟೇಶ್‌ನಾಯ್ಕ ಬುಧವಾರ ಚಾಲನೆ ನೀಡಿದರು.

ಗೋಧಿ ಮೊಳಕೆ(ಥೀಸ್) ಕೀಳುವ ಮೂಲಕ ಜಾತ್ರೆಗೆ ಚಾಲನೆ ನೀಡಿ ಮಾತನಾಡಿದ ನ್ಯಾಯಾಧೀಶರಾದ ವೆಂಕಟೇಶ್‌ನಾಯ್ಕ 4 ವರ್ಷಗಳಿಗೊಮ್ಮೆ ಮದಕರಿಪುರದಲ್ಲಿ ಸೇವಾಲಾಲ್ ಮರಿಯಮ್ಮ ಜಾತ್ರೆ ಅತ್ಯಂತ ವಿಜೃಂಭಣೆ ಹಾಗೂ ಶ್ರದ್ಧಾ ಭಕ್ತಿಯಿಂದ ನಡೆಯಲಿದೆ. ಅವಿವಾಹಿತ ಯುವತಿಯರು ಹತ್ತು ದಿನಗಳ ಕಾಲ ವ್ರತ ಆಚರಿಸಿ ಬೆಳೆಸುವ ಗೋಧಿ ಮೊಳಕೆ ಹಸಿರು ಪ್ರಕೃತಿಯ ಸಂಕೇತ. ಪರಿಸರ ಹಚ್ಚ ಹಸಿರಿನಿಂದ ಕೂಡಿದ್ದರೆ ಸಕಲ ಜೀವರಾಶಿಗಳು ನೆಮ್ಮದಿಯಿಂದ ಬದುಕುತ್ತವೆ ಎಂದು ಹೇಳಿದರು.

ಸೇವಾಲಾಲ್ ಮರಿಯಮ್ಮ ದೇವಸ್ಥಾನದ ಧರ್ಮದರ್ಶಿ ಕಮಿಟಿ ಗೌರವಾಧ್ಯಕ್ಷ ಹಾಲಾನಾಯ್ಕ, ಶಿವಾನಾಯ್ಕ, ಶ್ರೀನಿವಾಸ್‌ನಾಯ್ಕ, ಗಂಗಾನಾಯ್ಕ, ಯಂಕಾನಾಯ್ಕ, ಜಯಾನಾಯ್ಕ, ಚಂದ್ರನಾಯ್ಕ, ರಮೇಶ್‌ನಾಯ್ಕ ಸೇರಿದಂತ ಬಂಜಾರ ಸಮಾಜದ ಅನೇಕ ಪ್ರಮುಖರು ಸೇವಾಲಾಲ್ ಮರಿಯಮ್ಮ ಜಾತ್ರೆಯಲ್ಲಿ ಪಾಲ್ಗೊಂಡಿದ್ದರು.

## ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

ದಾವಣಗೆರೆ; ಈ ತಿಂಗಳ 27 ರಂದು ಜಿಲ್ಲೆಯಲ್ಲಿ ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆಯ ಅಗತ್ಯಗಳನ್ನು ಪೂರೈಸುವ ಇಪಿಎಫ್‌ಒ (ನೌಕರರ ಭವಿಷ್ಯ ನಿಧಿ ಸಂಸ್ಥೆ), ಜಿಲ್ಲೆಗಳಲ್ಲಿ ಹೆಜ್ಜೆ ಗುರುತು ಮತ್ತು ಉಪಸ್ಥಿತಿಯನ್ನು ಹೆಚ್ಚಿಸುವ ಉದ್ದೇಶದಿಂದ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಫೆಬ್ರವರಿ 27 ರಂದು ನಗರದ ಎಂ.ಸಿ.ಸಿ.ಬಿ ಬ್ಲಾಕ್, ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪ ಹಿಂಭಾಗದ ಚಿರಾಗ್ ಮೆಡಿಕೇರ್ ಸಲ್ಯೂಷನ್ ಪ್ರವೇಟ್ ಲಿಮಿಟೆಡ್‌ನಲ್ಲಿ ಕಾರ್ಯಕ್ರಮವನ್ನು ನಡೆಸಲಾಗುವುದು ಇಪಿಎಫ್‌ಒ ಮತ್ತು ಇಎಸ್‌ಐಸಿ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಭಾಗವಹಿಸಲಿದ್ದಾರೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಬ್ರಿಟಿಷರ ಅಧಿಪತ್ಯವನ್ನು ಕೊನೆಗಾಣಿಸಲು ಹೋರಾಡಿದ ಶಿವಾಜಿಮಹಾರಾಜರ ದಿಟ್ಟತನ ಮೆಚ್ಚುವಂತದ್ದು: ಶಾಸಕ

» ಚಳ್ಳಕೆರೆ

ದೇಶವನ್ನು ಅಕ್ರಮಿಸಿಕೊಂಡು ಆಡಳಿತ ನಡೆಸುತ್ತಿದ್ದ ಬ್ರಿಟಿಷ್‌ಶಾಹಿಯ ವಿರುದ್ಧ ಧೈರ್ಯ ಮತ್ತು ಸಾಹಸದಿಂದ ಹೋರಾಡಿದ ಮಹಾರಾಜರಲ್ಲಿ ಛತ್ರಪತಿಶಿವಾಜಿ ಮೊದಲಿಗರು. ಬ್ರಿಟಿಷರ ಸೇನೆಯನ್ನು ಹಿಮ್ಮೆಟ್ಟಿಸುವ ಮೂಲಕ ಸಮಾಜವನ್ನು ಕಾಪಾಡಿದ ಛತ್ರಪತಿಶಿವಾಜಿಮಹಾರಾಜರ ಆದರ್ಶಗಳು ನಮಗೆ ಸದಾಪ್ರೇರಣೆ ಎಂದು ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಬುಧವಾರ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಮರಾಠ ಸಮುದಾಯದ ಮುಖಂಡರು ಹಮ್ಮಿಕೊಂಡಿದ್ದ ಛತ್ರಪತಿ ಶಿವಾಜಿ ಮಹಾರಾಜರ 395ನೇ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನಸಲ್ಲಿಸುವ ಮೂಲಕ ಚಾಲನೆ



ನೀಡಿ ಮಾತನಾಡಿದರು. ಛತ್ರಪತಿಶಿವಾಜಿ ಮಹಾರಾಜರು 16ವಯಸ್ಸಿನಲ್ಲಿಯೇ ಹೋರಾಟಕ್ಕೆ ದುಮಿಕಿದವರು. ಎಲ್ಲರನ್ನೂ ಸಂಘಟಿಸಿ ಬ್ರಿಟಿಷರನ್ನು ಈ ನಾಡಿನಿಂದ ಕಾಲ್ಕಿಲುವಂತೆ ಮಾಡುವಲ್ಲಿ ಯಶಸ್ವಿಯಾದರು, ಸಮಾಜದ ಎಲ್ಲಾ ವರ್ಗಗಳಿಗೆ ಸಾಮಾಜಿಕ ನ್ಯಾಯದೊರಕಿಸಿಕೊಡುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸಿದವರು, ಶಿವಾಜಿಮಹಾರಾಜರ ಸೇವಾಕಾರ್ಯಗಳು ಬೇರೆ ಎಲ್ಲರಿಗೂ ಆತ್ಮವಿಶ್ವಾಸವನ್ನು ಹುಟ್ಟುಹಾಕಿದ್ದವು ಎಂದರು. ನಿವೃತ್ತ ಪ್ರಾಂಶುಪಾಲ ಟಿ.ನಾಗರಾಜು ಉಪನ್ಯಾಸ ನೀಡಿ, ರಾಷ್ಟ್ರದ ಎರಡು ಸಾವಿರ ವರ್ಷಗಳ ಇತಿಹಾಸವನ್ನು ಅವಲೋಕಿಸಿದಾಗ ಒಂದು ಸಾವಿರಕ್ಕೂ ಹೆಚ್ಚು ವರ್ಷಗಳ ಕಾಲ ಪರಕೀಯರನ್ನು ಹಿಮ್ಮೆಟ್ಟಿಸಿ ನಮ್ಮೆಲ್ಲರಿಗೂ ನೆಮ್ಮದಿ ಬದುಕನ್ನು ಕಲ್ಪಿಸುವಲ್ಲಿ ಶಿವಾಜಿ ಮಹಾರಾಜರ ಹೋರಾಟ ಅವಿಸ್ಮರಣೀಯ. ಶಿವಾಜಿಮಹಾರಾಜರ ದಿಟ್ಟತನದ ಹೋರಾಟ, ಸೇವಾಕಾರ್ಯ ಮತ್ತು ಸಮಾಜದ ಎಲ್ಲಾ ವರ್ಗದ ಬಗ್ಗೆ ಇದ್ದಕಳಕಳಿ ಪ್ರಶ್ನಾತೀತವೆಂದರು.

ತಹಶೀಲ್ದಾರ್ ರೇಹಾನ್ ಪಾಷ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಮುದಾಯದ ಅಧ್ಯಕ್ಷ ನಾರಾಯಣರಾವ್‌ಮೋಹಿತೆ, ಕಾರ್ಯದರ್ಶಿ ನಾಗರಾಜು, ಶ್ರೀನಿವಾಸ್‌ರಾವ್, ಭಾಸ್ಕರ್‌ರಾವ್ ಗಾಯಕವಾಡ್, ಅಬ್ಬಾಸ್‌ಪವರ್,ಲಕ್ಷ್ಮಿ,ಕಿರಣ್,ಇಓಶಶಿಧರ, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಭರಮಣ್ಣ, ಸ್ಥಾಯಿ ಸ್ಥಾಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ, ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ನಾಮನಿರ್ದೇಶನ ಸದಸ್ಯರಾದಬಡಗಿಪಾಪಣ್ಣ, ವೀರಭದ್ರಪ್ಪ, ಜಿಲ್ಲಾಕೆಡಿಪಿ ಸದಸ್ಯ ಓ.ರಂಗಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪ್ರವಾಸೋದ್ಯಮ ಇಲಾಖೆ : ವಿವಿಧ ತರಬೇತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಆಯೋಜಿಸಲು ಫುಡ್ ಅಂಡ್ ಬೇವರೇಜ್ ಸರ್ವಿಸ್ ಸ್ಟೇವಾರ್ಡ್, ಮಲ್ಟಿ ಕ್ಯೂಸಿನ್ ಕುಕ್ ಮತ್ತು ರೂಂ ಅಟೆಂಡೆಟ್‌ಗೆ ಅಭ್ಯರ್ಥಿಗಳಿಂದ ಮರು ಅರ್ಜಿ ಆಹ್ವಾನಿಸಲಾಗಿದೆ. ಫೆ.24 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಪ್ರವಾಸೋದ್ಯಮ/ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದ್ದು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯಥಿಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಮೈಸೂರಿನ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ ಹಾಗೂ ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಅವರ ಮೂಲಕ ವಸತಿ ಸಹಿತ ತರಬೇತಿ ಕಾರ್ಯಕ್ರಮ ಜಾರಿಗೊಳಿಸಲು ಉದ್ದೇಶಿಸಲಾಗಿದೆ. ಫುಡ್ ಅಂಡ್ ಬೇವರೇಜ್ ಸರ್ವಿಸ್ ಸ್ಟೇವಾರ್ಡ್, ರೂಂ ಅಟೆಂಡೆಂಟ್ ವಿಭಾಗದಲ್ಲಿ ನಾಲ್ಕು ತಿಂಗಳ ತರಬೇತಿ ಹಾಗೂ ಮಲ್ಟಿ ಕ್ಯೂಸಿನ್ ಕುಕ್ ವಿಭಾಗದಲ್ಲಿ 5 ತಿಂಗಳ ತರಬೇತಿ ಪಡೆಯಲು ಇಚ್ಚಿಸುವ ಅರ್ಹ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಇದೇ ಫೆ.18 ರಿಂದ ನಗರದ ಕೋಟೆ ಮುಂಭಾಗದ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ದ್ವಿ–ಪ್ರತಿಯಲ್ಲಿ ಫೆ.24ರ ಸಂಜೆ 4.30ರೊಳಗೆ ಕಚೇರಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ ಕಚೇರಿಯ ದೂರವಾಣಿ ಸಂಖ್ಯೆ 08194–234466 ಗೆ ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಫೆ.20ರಿಂದ ವಿದ್ಯುತ್ ಮಾರ್ಗ ಚೇತನ: ಗೋಪುರ ಮುಟ್ಟದಂತೆ ಸೂಚನೆ

» **ಚಿತ್ರದುರ್ಗ**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಹೊಳಲ್ಕೆರೆ ತಾಲ್ಲೂಕಿನ ಅರಸನಘಟ್ಟ ಗ್ರಾಮದಲ್ಲಿ 2*12.5 ಎಂ.ವಿ.ಎ 66/11 ಕೆವಿ ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರ ಹಾಗೂ 66/11 ಕೆವಿ ಅರಸನಘಟ್ಟ ವಿದ್ಯುತ್ ಉಪಕೇಂದ್ರದಿಂದ ಹಾಲಿ ಇರುವ 66 ಕೆವಿ ಹೊಳಲ್ಕೆರೆ–ಚಿಕ್ಕಜಾಜೂರು ವಿದ್ಯುತ್ ಮಾರ್ಗದವರೆಗೆ 4.135 ಕಿ.ಮೀ ಉದ್ದದ 66 ಕೆವಿ ಲಿಲೋ ಪ್ರಸರಣ ಮಾರ್ಗ ನಿರ್ಮಾಣದ ಕಾಮಗಾರಿಯು ಮುಕ್ತಾಯಗೊಂಡಿರುತ್ತದೆ. ಈ 66 ಕೆ.ವಿ.ವಿದ್ಯುತ್ ಮಾರ್ಗವನ್ನು ಇದೇ ಫೆಬ್ರವರಿ 20ರಂದು ಅಥವಾ ತದನಂತರ ಚೇತನಗೊಳಿಸುವುದರಿಂದ ಈ 66 ಕೆವಿ ಪ್ರಸರಣ ಮಾರ್ಗದ ವಿದ್ಯುತ್ ಗೋಪುರಗಳನ್ನು ಸಾರ್ವಜನಿಕರುಮುಟ್ಟುವುದಾಗಲಿ,ಹತ್ತುವುದಾಗಲಿ, ಮರದ ರೆಂಬೆ, ಲೋಹದ ತಂತಿಗಳನ್ನು ಹಾಗೂ ಇತರೆ ಯಾವುದೇ ವಸ್ತುಗಳನ್ನು ಮಾರ್ಗದ ಮೇಲೆ ಎಸೆಯುವುದಾಗಲಿ ಮತ್ತು ವಿದ್ಯುತ್ ಗೋಪುರಗಳಿಗೆ ಜಾನುವಾರುಗಳನ್ನುಕಟ್ಟುವುದಾಗಲಿಮಾಡಬಾರದು ಎಂದು ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ. ಈ ಮಾರ್ಗದ ಮೊಗಸಾಲೆಯಲ್ಲಿ ಅಪಾಯದ ಮಟ್ಟದಲ್ಲಿ ಇರುವ ಮರಗಳನ್ನು ಸುರಕ್ಷತೆಯ ದೃಷ್ಟಿಯಿಂದ ಭೂ ಮಾಲೀಕರು ಕೂಡಲೇ ಮಾರ್ಗದ ಮೊಗಸಾಲೆಯಲ್ಲಿರುವ ಮರಗಳನ್ನು ಕಡಿದು ಹಾಕಲು ಅನುಮತಿ ನೀಡಬೇಕು. ಒಂದು ವೇಳೆ ಈ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಈ ಮಾರ್ಗದಿಂದ ಸಾರ್ವಜನಿಕರಿಗೆ ಆಗುವ ಹಾನಿ, ತೊಂದರೆ, ಅಪಘಾತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜವಾಬ್ದಾರಿಯಾಗಿರುವುದಿಲ್ಲ.

**ವಿದ್ಯುತ್ ಹಾದುಹೋಗುವ ಪ್ರದೇಶಗಳು:** ಅಪ್ಪರಸನಹಳ್ಳಿ ಮತ್ತು ಅರಸನಘಟ್ಟ ಗ್ರಾಮಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಮಾರ್ಗ ಹಾದು ಹೋಗಲಿದೆ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2 ದಿನ ಓರಿಯಂಟೇಷನ್ ತರಬೇತಿ

» **ಚಿತ್ರದುರ್ಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಇದೇ ಫೆ.20 ಮತ್ತು 21ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಅನುಷ್ಠಾನದಲ್ಲಿ ಭಾಗೀದಾರ ಇಲಾಖೆಗಳ ಪಾತ್ರದ ಕುರಿತು ಎರಡು ದಿನಗಳ ಓರಿಯಂಟೇಷನ್ ತರಬೇತಿ ಹಮ್ಮಿಕೊಳ್ಳಲಾಗಿದೆ. ಫೆ.20ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾ ನ್ಯಾಯಾಲಯದ ಜೆಎಂಎಫ್‌ಸಿ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಆರ್.ಸಹನ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಡಿಹೆಚ್‌ಒ ಡಾ.ಜಿ.ಪಿ.ರೇಣುಪ್ರಸಾದ್, ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆ ಕಾಯ್ದೆ ಸಮಿತಿ ಅಧ್ಯಕ್ಷೆ ಭಾಗವಹಿಸುವರು.

# ಮಾ.01 ರಿಂದ 20 ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–1

## 15,991 ವಿದ್ಯಾರ್ಥಿಗಳಿಗೆ 26 ಪರೀಕ್ಷಾ ಕೇಂದ್ರಗಳು– ವ್ಯವಸ್ಥಿತವಾಗಿ ಪರೀಕ್ಷಾ ಕಾರ್ಯ ನಿರ್ವಹಿಸಿ– ಬಿ.ಟಿ.ಕುಮಾರಸ್ವಾಮಿ

» **ಚಿತ್ರದುರ್ಗ**



ಬರುವ ಮಾರ್ಚ್ 01 ರಿಂದ 20 ರವರೆಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ–1 ನಡೆಯಲಿದೆ. ಜಿಲ್ಲೆಯಲ್ಲಿ 15,991 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, 26 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿದೆ. ಪರೀಕ್ಷಾ ಕಾರ್ಯವನ್ನು ಯಾವುದೇ ಸಮಸ್ಯೆಯಾಗದಂತೆ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ದ್ವಿತೀಯ ಪಿಯುಸಿ ಪರೀಕ್ಷೆ–1 ರ ಪರೀಕ್ಷಾ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ನೀಡಿರುವ ಮಾರ್ಗಸೂಚಿಗಳನ್ನು ಎಲ್ಲ ಹಂತದ ಅಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ತಿಳಿಸಿದ ಅವರು, ಪರೀಕ್ಷೆ ಗೌಪ್ಯತೆ, ಪರೀಕ್ಷೆಯ ಪಾವಿತ್ರ್ಯತೆ ಮತ್ತು ಸಮಗ್ರತೆಗೆ ಧಕ್ಕೆಯಾಗದಂತೆ ಮುಕ್ತ ಹಾಗೂ ನ್ಯಾಯಸಮ್ಮತವಾಗಿ ಪರೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದರು.

ಪರೀಕ್ಷಾಕೇಂದ್ರಗಳಸುತ್ತಅಗತ್ಯಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು. ಪೊಲೀಸ್ ರಕ್ಷಣೆಯಲ್ಲಿಯೇ ಪ್ರಶ್ನೆಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ತಲುಪಿಸಬೇಕು. ಪ್ರಶ್ನೆಪತ್ರಿಕೆಗಳ ರಕ್ಷಣೆಗಾಗಿ ನೇಮಿಸಿರುವ ತಹಶೀಲ್ದಾರ್, ಬಿಇಒ ಹಾಗೂ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರನ್ನು ಒಳಗೊಂಡ ವಿಶೇಷ ಪ್ರಶ್ನೆ ಪತ್ರಿಕಾ ಪಾಲಕರ ತ್ರಿಸದಸ್ಯ ಸಮಿತಿ ನಿಯಮಾನುಸಾರ ಕಾರ್ಯನಿರ್ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಲ್ಲಿ ಉತ್ತಮ ಆಹ್ಲಾದಕರ ವಾತಾವರಣದಲ್ಲಿ ಪರೀಕ್ಷೆ ಬರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಡೆಸ್ಕ್, ಗಾಳಿ–ಬೆಳಕಿನ ವ್ಯವಸ್ಥೆ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಸೌಲಭ್ಯಗಳು ಕಲ್ಪಿಸಬೇಕು ಎಂದು ಹೇಳಿದರು.

ಪರೀಕ್ಷಾ ಗೌಪ್ಯತೆ ಹಾಗೂ ಪಾರದರ್ಶಕತೆ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು. ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ 163ರ ನಿಷೇಧಾಜ್ಞೆಯನ್ನು ಜಿಲ್ಲಾಧಿಕಾರಿಗಳು ಜಾರಿಗೊಳಿಸಿ, ಆದೇಶಿಸುವರು. ಪರೀಕ್ಷಾ ಕೇಂದ್ರಗಳಲ್ಲಿ ಪ್ರಶ್ನೆಪತ್ರಿಕೆ ತೆರೆಯುವಾಗ ಹಾಗೂ ಉತ್ತರ ಪತ್ರಿಕೆಗಳನ್ನು ಬಂಡಲ್ ಮಾಡುವಾಗ ಸಿಸಿ ಟಿವಿ ವೀಕ್ಷಣೆಯಡಿಯಲ್ಲಿ ಕಾರ್ಯನಿರ್ವಹಿಸಬೇಕು ಮತ್ತು ಎಲ್ಲ ಕೊಠಡಿಗಳಿಗೆ ಸಿಸಿ ಟಿವಿ ಅಳವಡಿಸಬೇಕು ಎಂದು ಹೇಳಿದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ ಮಾತನಾಡಿ, ಎಲ್ಲ ಪರೀಕ್ಷಾ ಕೇಂದ್ರಗಳಿಗೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಅವಶ್ಯಕತೆ ಇದೆ. ಪರೀಕ್ಷಾ ಕೇಂದ್ರಗಳಿಗೆ ಸಹ ಮುಖ್ಯ ಅಧೀಕ್ಷಕರು ಹಾಗೂ ಜಾಗೃತ ದಳಗಳನ್ನು ನೇಮಿಸಲಾಗಿದೆ. ಪರೀಕ್ಷೆ ನಡೆಯುವ ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕ್ಯಾಸ್ಟಿಂಗ್‌ಗೆ ವ್ಯವಸ್ಥೆ ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾ ಖಜಾನೆಯಿಂದ ಪ್ರಶ್ನೆ ಪತ್ರಿಕೆಗಳನ್ನು ಕೊಂಡ್ಯೊಯುವ ಮತ್ತು ವಿತರಣೆ ಮಾಡುವ ಸಮಯಕ್ಕೆ 8 ಮಾರ್ಗಗಳ ತಂಡಕ್ಕೆ ಪ್ರತಿ ತಾಲ್ಲೂಕಿನ ಮಾರ್ಗಾಧಿಕಾರಿಗಳ ಜೊತೆಗೆ ಪೊಲೀಸ್ ರಕ್ಷಣೆ (ಗನ್ ಮ್ಯಾನ್) ಬೇಕಾಗಿರುತ್ತದೆ ಎಂದು ಹೇಳಿದರು.

ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮೂಲಕ ದಾಖಲಿಸಬೇಕು. ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಎರಡು ಗಂಟೆ ಮುಂಚಿತವಾಗಿ ಬೆಳಿಗ್ಗೆ 8ಕ್ಕೆ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು. ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಮೊಬೈಲ್ ಫೋನ್ ಅಥವಾ ಇತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದರು.

15,991 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ : ಮಾರ್ಚ್ 01 ರಿಂದ 20 ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–1 ಜರುಗಲಿದೆ. ಈ ಪರೀಕ್ಷೆಗೆ ಜಿಲ್ಲೆಯ 15,991 ವಿದ್ಯಾರ್ಥಿಗಳು ನೋಂದಾಸಿಕೊಂಡಿದ್ದು, ಒಟ್ಟು 26 ಪರೀಕ್ಷಾ ಕೇಂದ್ರಗಳಿಗೆ 139 ಕಾಲೇಜುಗಳು ಟ್ಯಾಗ್ ಆಗಿವೆ ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ ತಿಳಿಸಿದರು.

ಚಿತ್ರದುರ್ಗ ತಾಲ್ಲೂಕಿನಲ್ಲಿ 10 ಪರೀಕ್ಷಾಕೇಂದ್ರಗಳಿಗೆ 6450 ವಿದ್ಯಾಥಿಗಳು, ಚಳ್ಳಕೆರೆತಾಲ್ಲೂಕಿನಲ್ಲಿ4ಪರೀಕ್ಷಾಕೇಂದ್ರಗಳಿಗೆ 2986 ವಿದ್ಯಾರ್ಥಿಗಳು, ಹಿರಿಯೂರು ತಾಲ್ಲೂಕಿನಲ್ಲಿ 4 ಪರೀಕ್ಷಾ ಕೇಂದ್ರಗಳಿಗೆ 1946 ವಿದ್ಯಾರ್ಥಿಗಳು, ಹೊಸದುರ್ಗ ತಾಲ್ಲೂಕಿನಲ್ಲಿ 4 ಪರೀಕ್ಷಾ ಕೇಂದ್ರಗಳಿಗೆ 2151 ವಿದ್ಯಾರ್ಥಿಗಳು, ಮೊಳಕಾಲ್ಮುರು ತಾಲ್ಲೂಕಿನಲ್ಲಿ 2 ಪರೀಕ್ಷಾ ಕೇಂದ್ರಗಳಿಗೆ 977 ವಿದ್ಯಾರ್ಥಿಗಳು ಹಾಗೂ ಹೊಳಲ್ಕೆರೆ ತಾಲ್ಲೂಕಿನಲ್ಲಿ 2 ಪರೀಕ್ಷಾ ಕೇಂದ್ರಗಳಿಗೆ 672 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 26 ಪರೀಕ್ಷಾ ಕೇಂದ್ರಗಳಿಂದ 15991 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರ ಎಂದು ತಿಳಿಸಿದರು.

ಪರೀಕ್ಷಾ ವೇಳಾಪಟ್ಟಿ : ಮಾ. 01 ರಂದು ಕನ್ನಡ, ಅರೇಬಿಕ್. ಮಾ. 03–ಗಣಿತ, ಶಿಕ್ಷಣ ಶಾಸ್ತ್ರ, ತರ್ಕಶಾಸ್ತ್ರ, ವ್ಯವಹಾರ ಅಧ್ಯಯನ. ಮಾ. 04–ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್. ಮಾ. 05–ರಾಜ್ಯ ಶಾಸ್ತ್ರ, ಸಂಖ್ಯಾ ಶಾಸ್ತ್ರ. ಮಾ. 07–ಇತಿಹಾಸ, ಭೌತಶಾಸ್ತ್ರ. ಮಾ. 10–ಐಚ್ಛಿಕ ಕನ್ನಡ, ಲೆಕ್ಕಶಾಸ್ತ್ರ, ಭೂಗರ್ಭಶಾಸ್ತ್ರ, ಗೃಹ ವಿಜ್ಞಾನ. ಮಾ. 12– ಮನಃಶಾಸ್ತ್ರ, ರಸಾಯನಶಾಸ್ತ್ರ, ಮೂಲ ಗಣಿತ. ಮಾ. 13– ಅರ್ಥ ಶಾಸ್ತ್ರ. ಮಾ. 15– ಇಂಗ್ಲೀಷ್. ಮಾ. 17– ಭೂಗೋಳಶಾಸ್ತ್ರ. ಮಾ. 18–ಜೀವಶಾಸ್ತ್ರ, ಸಮಾಜಶಾಸ್ತ್ರ, ವಿದ್ಯುನ್ಮಾನಶಾಸ್ತ್ರ, ಗಣಕ ವಿಜ್ಞಾನ. ಮಾ. 19–ಹಿಂದೂಸ್ತಾನಿ ಸಂಗೀತ, ಮಾಹಿತಿ ತಂತ್ರಜ್ಞಾನ, ರೀಟೈಲ್, ಆಟೋಮೊಬೈಲ್, ಹೆಲ್ತ್ ಕೇರ್, ಬ್ಯೂಟಿ ಅಂಡ್ ವೆಲ್‌ನೆಸ್. ಮಾ.20– ಹಿಂದಿ.

ಸಭೆಯಲ್ಲಿ ಜಿಲ್ಲೆಯ ಎಲ್ಲ ತಾಲ್ಲೂಕಿನ ತಹಶೀಲ್ದಾರ್‌ಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ನಾಳೆ ಸೇವಾಲಾಲ್ ಮಹಾರಾಜರ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ

» **ಚಿತ್ರದುರ್ಗ**



ಪ್ರತಿ ವರ್ಷದಂತೆ ಈ ಬಾರಿಯೂ ಬಂಜಾರ ಲಂಬಾಣಿ ಸಮಾಜದ ವತಿಯಿಂದ ಫೆ.21 ರಂದು ಸಂತ ಸೇವಾಲಾಲ್ ಮಹಾರಾಜ್‌ರವರ 286 ನೇ ಜಯಂತಿ ಹಾಗೂ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ.ಯಲ್ಲಿ ಶೇ.85 ಕ್ಕೂ ಹೆಚ್ಚು ಅಂಕಗಳನ್ನು ಪಡೆದಿರುವ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದೆಂದು ಬಂಜಾರ ಸಮಾಜದ ಜಿಲ್ಲಾಧ್ಯಕ್ಷ ಎಂ.ಸತೀಶ್‌ಕುಮಾರ್ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಅಂದು ಬೆಳಿಗ್ಗೆ 11 ಕ್ಕೆ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಹೊರಟು ಬಂಜಾರ ಭವನ ತಲುಪಲಿದೆ. ಸಂಸದ ಗೋವಿಂದ ಕಾರಜೋಳ ಜಯಂತಿ ಉದ್ಘಾಟಿಸಲಿದ್ದಾರೆ. ಕರ್ನಾಟಕ ತಾಂಡ ಅಭಿವೃದ್ದಿ ನಿಗಮದ ಅಧ್ಯಕ್ಷ ಎನ್. ಜಯದೇವನಾಯ್ಕ ವಿಶೇಷ ಅತಿಥಿಯಾಗಿ ಪಾಲ್ಗೊಳ್ಳುವರು. ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ, ಕರ್ನಾಟಕ ತಾಂಡ ಅಭಿವೃದ್ದಿ ನಿಗಮದ ಮಾಜಿ ಅಧ್ಯಕ್ಷ ಪಿ.ರಾಜೀವ್, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಶಾಸಕ ಎಂ.ಬಸವರಾಜ್‌ನಾಯ್ಕ ಇನ್ನು ಮುಂತಾದವರು ಜಯಂತಿಯಲ್ಲಿ ಭಾಗವಹಿಸಲಿದ್ದಾರೆ.ಬಂಜಾರ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಎಂ.ಸತೀಶ್‌ಕುಮಾರ್ ಮನವಿ ಮಾಡಿದರು. ಸಹ ಕಾರ್ಯದರ್ಶಿ ಪರಮೇಶ್‌ನಾಯ್ಕ, ವೀರಭದ್ರನಾಯ್ಕ, ರಮೇಶ್‌ನಾಯ್ಕ, ಉಮಾಪತಿ, ಪ್ರವೀಣ್‌ನಾಯ್ಕ, ತಿಪ್ಪೇಶ್‌ನಾಯ್ಕ, ಪ್ರಶಾಂತ್‌ನಾಯ್ಕ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಬಸವರಾಜನ್‌ರವರಿಂದ ಕಾಮಧೇನು ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ನೂತನ ಶಾಖೆ ಉದ್ಘಾಟನೆ



» **ಚಿತ್ರದುರ್ಗ**

ಮಧ್ಯಮ ವರ್ಗದವರ ಆಶಾಕಿರಣವಾಗಿರುವ ಸಹಕಾರಿ ಸಂಸ್ಥೆಗಳು ಪರಸ್ಪರ ನಂಬಿಕೆ ವಿಶ್ವಾಸವನ್ನು ಕಾಪಾಡಿಕೊಂಡು ವ್ಯವಹರಿಸಿದಾಗ ಮಾತ್ರ ಯಶಸ್ಸು ಕಾಣಲು ಸಾಧ್ಯ ಎಂದು ಮಾಜಿ ಶಾಸಕ ಎಸ್.ಕೆ.ಬಸವರಾಜನ್ ತಿಳಿಸಿದರು. ರೈತ ಭವನ ಸಮೀಪ ಕಾಮಧೇನು ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಐದನೆ ಶಾಖೆ ಉದ್ಘಾಟಿಸಿ ಮಾತನಾಡಿದರು. ಇಪ್ಪತ್ತು ವರ್ಷಗಳ ಇತಿಹಾಸವಿರುವ ಈ ಸಂಸ್ಥೆ ಎಲ್ಲಾ ವರ್ಗದವರಿಗೆ ಸಾಲ ಸೌಲಭ್ಯ ನೀಡುತ್ತ ಸಮಾಜಮುಖಿಯಾಗಿ ಕೆಲಸ ಮಾಡಿಕೊಂಡು ಬರುತ್ತಿದೆ. ಈ ಭಾಗದ ಜನರಿಗೆ ಇದರ ಪ್ರಯೋಜನ ಲಭಿಸಲಿ ಎಂದು ಹೇಳಿದರು. ಕಾಮಧೇನು ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ವ್ಯವಸ್ಥಾಪಕ ನಿರ್ದೇಶಕ ವೆಂಕಟಪ್ಪ ಮಾತನಾಡಿ ಗ್ರಾಹಕ ಸ್ನೇಹಿ ಯೋಜನೆಗಳನ್ನು ಈ ಸಂಸ್ಥೆ ಜಾರಿಗೆ ತಂದಿದ್ದು, ಲಾಭದ ಸಿಂಹಪಾಲು ಉಳಿತಾಯ ಮಾಡುವವರಿಗೆ ಸಿಗಲಿದೆ. ಸ್ವ–ಉದ್ಯೋಗ ಕೈಗೊಳ್ಳುವವರಿಗೆ ಸಾಲ ಸೌಲಭ್ಯ ದೊರಕಿಸಿ ಸಹಕಾರಿ ತತ್ವದಡಿಯಲ್ಲಿ ಮುನ್ನಡೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಶಾಖಾ ವ್ಯವಸ್ಥಾಪಕ ಶ್ರೀನಾಥ್ ಮಾತನಾಡುತ್ತ ಹದಿನೈದು ವರ್ಷಗಳ ಕಾಲ ಸಹಕಾರಿ ಕ್ಷೇತ್ರದಲ್ಲಿ ಅನುಭವವಿದ್ದು, ಈ ಭಾಗದ ಜನತೆಗೆ ಸೇವೆ ಒದಗಿಸುವ ಉದ್ದೇಶದಿಂದ ಇಲ್ಲಿ ನೂತನ ಶಾಖೆಯನ್ನು ಆರಂಭಿಸಿದ್ದು, ಅನುಕೂಲಕರ ಯೋಜನೆಗಳನ್ನು ಅನುಷ್ಟಾನಗೊಳಿಸುವುದಾಗಿ ಷೇರುದಾರರಿಗೆ ಭರವಸೆ ನೀಡಿದರು.

## ಫೆ.20 ರಂದು ವಿದ್ಯುತ್ ವ್ಯತ್ಯಯ

» **ದಾವಣಗೆರೆ**


ಕುಕ್ಕವಾಡ ಮತ್ತು ಶ್ಯಾಗಲೆ ವಿದ್ಯುತ್ ವಿತರಣ ಕೇಂದ್ರದಲ್ಲಿ ತುರ್ತಾಗಿ ನಿರ್ವಾಹಣ ಕಾರ್ಯ ಹಮ್ಮಿಕೊಂಡಿರುವುದರಿಂದ ಫೆ.20 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಸಹಕರಿಸುವಂತೆ ಬೆಸ್ಕಾಂ ಪ್ರಕಟಣೆ ತಿಳಿಸಿದೆ.

**ವಿದ್ಯುತ್ ವ್ಯತ್ಯಯ:** ಹೆಚ್.ಎಂ.ಹೊಳೆ 66/11 ಕೆವಿ ವಿ.ವಿ ಕೇಂದ್ರದಲ್ಲಿ 4ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಫೆ.20 ರಂದು ಬೆಳಿಗ್ಗೆ 10 ಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಈ ವಿದ್ಯುತ್ ವಿತರಣಾ ಕೇಂದ್ರದ ಎಲ್ಲ ಎನ್.ಜೆ.ವೈ ಮತ್ತು ಐ.ಪಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

# ಶಿವಾಜಿ ಮಹಾರಾಜರ ಶೌರ್ಯ ಇಂದಿನ ಜನಾಂಗಕ್ಕೂ ಸ್ಪೂರ್ತಿ: ಜಿಲ್ಲಾಧಿಕಾರಿ

» **ದಾವಣಗೆರೆ**



ಶಿವಾಜಿ ಮಹಾರಾಜರ ಹೋರಾಟ ಮನೋಭಾವ, ಧೈರ್ಯ ಹಾಗೂ ಶೌರ್ಯ ಇಂದಿನ ಜನಾಂಗಕ್ಕೆ ಸ್ಪೂರ್ತಿಯಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ಕ್ಷತ್ರಿಯ ಮರಾಠ ವಿದ್ಯಾವರ್ಧಕ ಸಂಘದ ವತಿಯಿಂದ ಬುಧವಾರ ಜಿಲ್ಲಾಡಳಿತ ಕಚೇರಿ ಆಯೋಜಿಸಲಾಗಿದ್ದ, ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ, ಬಳಿಕ ಅವರು ಮಾತಾನಾಡಿದರು.

ಶೌರ್ಯಕ್ಕೆ ಮತ್ತೊಂದು ಹೆಸರು ಛತ್ರಪತಿ ಶಿವಾಜಿ. ಶೋಷಿತರ, ಮಹಿಳೆಯರ, ಬಡವರ ಪರವಾಗಿ ಶಿವಾಜಿ ಕೆಲಸ ಮಾಡಿದರು. ಚಿಕ್ಕಂದಿನಿಂದಲೇ ನಾಯಕತ್ವದ ಗುಣಗಳನ್ನು ಶಿವಾಜಿ ಮೈಗೂಡಿಸಿಕೊಂಡಿದ್ದರು. ಸಮಾಜದ ಎಲ್ಲಾ ವರ್ಗದ ಜನರನ್ನು ರಕ್ಷಣೆ ಮಾಡಿದ್ದರು. ಹಿಂದೂ ಧರ್ಮ ರಕ್ಷಣೆ ಮಾಡಿದ ಕೀರ್ತಿ ಶಿವಾಜಿಗೆ ಸಲ್ಲುತ್ತದೆ. ಮೊಘಲರ ವಿರುದ್ಧ ಅನೇಕ ಯುದ್ಧಗಳನ್ನು ಮಾಡಿ ಅವರನ್ನು ಸೋಲಿಸಿ ಮರಾಠ ಚಕ್ರವರ್ತಿ ಎಂದು ಗುರುತಿಸಿಕೊಂಡರು. ಇಂತಹ ಮಹಾನ್ ವ್ಯಕ್ತಿಯ ಜಯಂತಿಯನ್ನು ಸರ್ಕಾರದಿಂದ ಆಚರಿಸುತ್ತಿರುವುದು ಸಂತಸ ಎನಿಸುತ್ತದೆ. ಶಿವಾಜಿಯ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ಸಮಾಜದ ಏಳಿಗೆಗಾಗಿ ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಗಂಗಾಧರ್ ಹೇಳಿದರು.


ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಮಹಾನಗರಪಾ ಪಾಲಿಕೆಯ ಮಹಾಪೌರ ಚಮನ್ ಸಾಬ್.ಕೆ, ಪಾಲಿಕೆ ಆಯುಕ್ತೆ ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಕ್ಷತ್ರಿಯ ಮರಾಠ ವಿದ್ಯಾವರ್ಧಕ ಸಂಘ(ರಿ)ದ ಗೌರವಾಧ್ಯಕ್ಷರಾದ ಯಶವಂತರಾವ್ ಜಾಧವ್, ಅಧ್ಯಕ್ಷರಾದ ಡಿ. ಮಾಲತೇಶರಾವ್ ಜಾದವ್, ಸಂಘದ ಪದಾಧಿಕಾರಿಗಳು ಉಪಸ್ಥಿತಿರಿದ್ದರು.

## ನನ್ನಿವಾಳ ಗ್ರಾಪಂ ಹಟ್ಟಿಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರಕ್ಕೆ ಶಾಸಕ ಟಿ.ರಘುಮುರ್ತಿ ಚಾಲನೆ



**ಚಳ್ಳಕೆರೆ:** ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೆಚ್ಚು ಹಟ್ಟಿಗಳನ್ನು ಹೊಂದಿರುವ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಟ್ಟಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಬೇಕೆಂದು ಆ ಭಾಗದ ಗ್ರಾಮಸ್ಥರು ನಿರಂತರಮನವಿ ಮಾಡುತ್ತಿದ್ದು, ಕೆಎಸ್‌ಆರ್‌ಟಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿ ಎರಡು ಬಸ್‌ಗಳ ಸೇವೆಯನ್ನು ಇಂದಿನಿಂದ ಆರಂಭಿಸಿದ್ದು, ಗ್ರಾಮಸ್ಥರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಕ್ಷೇತ್ರದಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷಟಿ.ರಘುಮೂರ್ತಿ ತಿಳಿಸಿದರು. ಅವರು, ಬುಧವಾರ ಮಧ್ಯಾಹ್ನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಚಳ್ಳಕೆರೆ, ನನ್ನಿವಾಳ ತೋಡ್ಲಾರಹಟ್ಟಿ, ಬಂಗಾರದೇವರಹಟ್ಟಿ, ಪೇಲಾರಹಟ್ಟಿ, ಚಿತ್ರದುರ್ಗ ಮೂಲಕ ನನ್ನಿವಾಳ, ಪೆತ್ತಮರಹಟ್ಟಿ ಸೇರಿದಂತೆ 15ಕ್ಕೂ ಹೆಚ್ಚು ಹಟ್ಟಿಗಳಿಗೆ ಬಸ್ ಸೌಕರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಕೆಎಸ್‌ಆರ್‌ಟಿಸಿ ಜಿಲ್ಲಾಧಿಕಾರಿ ಶ್ರೀನಿವಾಸ್‌ಮೂರ್ತಿ ಮಾತನಾಡಿ, ಶಾಸಕರು ಹಲವಾರು ಬಾರಿ ಈ ಭಾಗಗಳಿಗೆ ಬಸ್ ವ್ಯವಸ್ಥೆ ಮಾಡುವಂತೆ ಮನವಿ ಮಾಡುತ್ತಿದ್ದರು. ಕೆಲವೊಂದು ಸಣ್ಣಪುಟ್ಟಸಮಸ್ಯೆಯಿಂದ ಬಸ್ ವ್ಯವಸ್ಥೆ ಮಾಡಲಾಗಿರಲಿಲ್ಲ. ಆದರೆ, ಗ್ರಾಮೀಣ ಭಾಗದ ಜನರಿಗೆ ಸಾರಿಗೆ ಸೌಕರ್ಯ ತೊಂದರೆಯಾಗದಂತೆ ಶಾಸಕರ ಮಾರ್ಗದರ್ಶನದಲ್ಲಿ ಎರಡು ಪ್ರತ್ಯೇಕ ರೋಟ್ ಬಸ್‌ಗಳನ್ನು ವ್ಯವಸ್ಥೆ ಮಾಡಿ ಸೇವೆಗೆ ಸಮರ್ಪಿಸಲಾಗಿದೆ ಎಂದರು.





# ಬದುಕಿನ ಯಶಸ್ಸೆಂದರೇ ಕೇವಲ ಹಣ ಗಳಿಕೆಯಲ್ಲ!

ಬದುಕಿನಲ್ಲಿ ಯಶಸ್ಸು ಸುಮ್ಮನೆ ಬರುವುದಿಲ್ಲ. ಬಂದ ಯಶಸ್ಸು ಸುಮ್ಮನೆ ಬಳಿಯಿರುವುದಿಲ್ಲ. ಯಶಸ್ಸು ಗಳಿಸಲು ಮತ್ತು ಉಳಿಸಿಕೊಳ್ಳಲು ಪರಿಶ್ರಮಪಡುತ್ತಲೇ ಇರಬೇಕು. ಬಹುತೇಕ ಯಶಸ್ಸು ಪಡೆದ ಪ್ರತಿಭಾವಂತರ ಹಿಂದೆ ಬಹಳ ನೋವುಗಳ ಬದುಕಿದೆ. ದುಃಖ ದುಮ್ಮಾನದ ವ್ಯಥೆಯಿದೆ. ಸೋಲುಗಳ ಸರಣಿಯಿದೆ. ಕೌಟುಂಬಿಕ ಅವ್ಯವಸ್ಥೆಯಿದೆ. ಸಾಮಾಜಿಕ ಏರುಪೇರುಗಳಿವೆ. ಭಾವನಾತ್ಮಕ ತೊಳಲಾಟಗಳಿವೆ. ಕಣ್ಣೀರ ಕಡಲಿನ ಕಥೆಗಳಿವೆ.

ಕಿಯಾನು ಚಾರ್ಲ್ಸ್ ರೀವ್ಸ್ ಬಹಳ ಪ್ರಸಿದ್ಧ ಹಾಲಿವುಡ್ ನಟ. ತನ್ನ ನಟನೆಯ ಉತ್ತುಂಗದಲ್ಲಿ ಬಹು ಕೋಟಿಗಳ ಲೆಕ್ಕದಲ್ಲಿ ಸಂಭಾವನೆ ಪಡೆಯುವ ನಟನಾಗಿದ್ದವನು. ಅಷ್ಟಾಗಿದ್ದರೆ ಇದು ಬರೀ ಹಣವಂತನ ಕತೆಯಾಗಿ ನೂರರಲ್ಲಿ ಒಂದಾಗುತ್ತದೆ. ಆದರೆ ಇದು ಗುಣವಂತನ ಕತೆ! ಬಾಲ್ಯದಲ್ಲಿ ಕಿಯಾನುಗೆ ನಟನಾಗಬೇಕೆಂಬ ಅತಿ ಉಮ್ಮೇದೇನು ಇರಲಿಲ್ಲ. ವಿದ್ಯಾಭ್ಯಾಸದ ಹೈಸ್ಕೂಲು ಹಂತದಲ್ಲಿ ಆಗಾಗ ರಂಗದಲ್ಲಿ ಒಂದೆರಡು ನಾಟಕಗಳಲ್ಲಿ ಅಭಿನಯಿಸಿದ್ದನು. ಅಷ್ಟೆ ಅಲ್ಲ ಅಲ್ಲಿನ ಸ್ಕೂಲ್ ಆಫ್ ಆರ್ಟ್ಸ್‌ನಿಂದ ಇವನ ಜೋರು ಬಾಯಿ ತಂಟೆಕೋರತನ ಜಿಗುಟು ಸ್ವಭಾವದಿಂದ ಶಾಲೆಯಿಂದ ಆಗಾಗ ಡಿಬಾರ್ ಸಹ ಆಗುತ್ತಿದ್ದನು. ಓದು ಬರಹದ ಚುರುಕುಮತಿಯೂ ಆಗಲಿಲ್ಲ. ಮುಂದೆ ಪದವಿ ಪಡೆಯುವಾಗ ಹಾಕಿ ತಂಡದ ಗೋಲ್ ಕೀಪರ್ ಆಗಿದ್ದವನು. ಹಾಗೆಲ್ಲ ತನ್ನ ತಂಡದಲ್ಲಿ ಗೋಡೆಯೆಂದೇ ಹೆಸರು ಗಳಿಸಿದ್ದವನು. ಕಿಯಾನ್ ಇದ್ದರೆ ಮುಗಿಯಿತು ತಂಡಕ್ಕೆ ಗೆಲುವೊಂದೇ ಖಚಿತ. ಆದರೆ ತನ್ನ ಕುಟುಂಬದ ನೆಲೆಕಾಣದ ಅಸ್ಥಿರತೆ ಅಲೆದಾಟದಿಂದ ಕಾಲೇಜು ವಿದ್ಯಾಭ್ಯಾಸವೂ ಮುಂದುವರೆಯಲಿಲ್ಲ. ಅವನ ತಾಯಿಯಂತು ಯಾರೊಂದಿಗೂ ಹೊಂದಿಕೊಂಡು ಹೋಗುವಂತಹ ತಾಳ್ಮೆಯ ಮುಂದಾಲೋಚನೆಯ ಸ್ವಭಾವದವಳಾಗಿರಲಿಲ್ಲ. ಮೇಲಿಂದ ಮೇಲೆ ತನ್ನ ವೈವಾಹಿಕ ಸಂಬಂಧಗಳ ಬದಲಾಯಿಸುತ್ತಿದ್ದಳು. ಕಿಯಾನು ರೀವ್ಸನ ಬಯಾಲಾಜಿಕಲ್ ತಂದೆ ಅವನು ಮೂರು ವರ್ಷದವನಿದ್ದಾಗಲೇ ಬಿಟ್ಟು ಹೋದದ್ದು ಅವನ ಬಾಳಿನ ಬಹು ದುಃಖಕರ ಸಂಗತಿ. ಅಲ್ಲಿಂದ ಶುರುವಾದ ಬದುಕಿನ ನೋವಿನ ಅಲೆದಾಟ ಜೀವನದ ಕೊನೆಯವರೆಗು ನಿಂತದ್ದೇ ಇಲ್ಲ.

ಲೆಬನಾನ್ ದೇಶದ ಬೈರೂತ್ ನಲ್ಲಿ ಸೆಪ್ಟೆಂಬರ್ 2, 1964 ರಂದು ಜನಿಸಿದ ಕಿಯಾನು ಚಾರ್ಲ್ಸ್ ರೀವ್ಸ ತನ್ನ ಜೀವನದ ಬಹು ಸಮಯ ಕಳೆದದ್ದು ಕೆನಡಾದಲ್ಲಿ. ತಾಯಿ ಪೇಟ್ರೀಶಿಯಾ ಬಾಂಡ್ ತಂದೆ ಸ್ಯಾಮ್ಯುಯೆಲ್ ನೋವ್ಲಿನ್ ರೀವ್ಸ್. ಆಂಗ್ಲ ಸಂಸ್ಕೃತಿ ಹಿನ್ನೆಲೆಯ ಪೇಟ್ರೇಷಿಯಾ ಭೈರೂತ್ ನಲ್ಲಿ ಟೈಲರಿಂಗ್ ಕೆಲಸದಲ್ಲಿರುವಾಗ ಅಮೇರಿಕಾ ಹವಾಯಿಯನ್ ಸಂಸ್ಕೃತಿಯ ಸ್ಯಾಮ್ಯುಯೆಲ್ ನೋವ್ಲಿನ್ ರೀವ್ಸ್ ಪರಿಚಯವಾಗಿ ಸತಿಪತಿಗಳಾದರು. ಅವನ ತಂದೆ ಸ್ಯಾಮ್ಯುಯೆಲ್ ಅಪಾರಾಧದ ಹಿನ್ನೆಲೆಯಲ್ಲಿ ಜೈಲು ಸೇರಿದವನು ಬಿಡುಗಡೆಯ ನಂತರವು ಹೆಂಡತಿ ಮತ್ತು ಮಗನ ಬಳಿ ಬರಲಿಲ್ಲ. ಚಿಕ್ಕಪ್ಪನಾದ ಹೆನ್ರಿ ಕೆಯಾನೊ ರೀವ್ಸ ಬಹು ಅಕ್ಕರೆ ಕಾಳಜಿಯಿಂದ ಚಾರ್ಲ್ಸ್ ರೀವ್ಸನನ್ನು ಪೋಷಿಸಿದನು. ಆದರೆ ತಾಯಿಯ ವೈವಾಹಿಕ ಜೀವನದ ಅಸ್ಥಿರತೆಯಿಂದ ಆಸ್ಟ್ರೇಲಿಯಾ, ಬ್ರಿಟನ್, ಲ್ಯಾಟಿನ್ ಅಮೇರಿಕ ಅಲೆದು ಯುನೈಟೆಡ್ ಸ್ಟೇಟ್ಸ ನಂತರ ಕೆನಡಾದ ಟೊರಾಂಟೊದಿ ನೆಲೆಯಾದರು. ಅವನ ಮಲ ತಂದೆಯಿಂದ ಎಮ್ಮ ರೋಸ್, ಕಿಮ್, ಕರಿನಾ ಮಿಲ್ಲರ್ ಎಂಬ ಸಹೋದರಿಯರಾದರು. ಕಿಯಾನೊನ ಮುದ್ದಿನ ತಂಗಿಯಾದ ಕಿಮ್ ಚಿಕ್ಕಂದಿನಲ್ಲೆ ಲ್ಯುಕಿಮಿಯಾದಿಂದ ನರಳಿ ತೀರಿಕೊಂಡಳು. ಇದು ಅವನಿಗೆ ತಂದೆಯ ನಿರ್ಗಮನದ ನಂತರ ಬಹಳ ದುಃಖ ನೀಡಿತು. ಮನೆಬಿಟ್ಟು ಬಹುಕಾಲ ಅಲೆಮಾರಿಯಂತೆ ಅಲೆದಾಡುವಂತೆ ಮಾಡಿತು.

ಪದವಿ ಅಪೂರ್ಣತೆಯೊಂದಿಗೆ ಜೀವನೋಪಾಯಕ್ಕೆ ಪ್ರೆಸ್ ನಲ್ಲಿ ವಿವಿಧ ರಂಗಶಾಲೆಗಳಲ್ಲಿ ಕೆಲಸಕ್ಕೆ ತೊಡಗಿದ. ಆಗ ಸ್ವ ಚಿಂತನದಿ ಮುಳುಗಿ ತನ್ನ ಶಕ್ತಿ ಸಾಮರ್ಥ್ಯಗಳೇನು ಎಂದು ಓರೆ ಹಚ್ಚಿಕೊಂಡ. ತನ್ನೊಳಗೆ ಒಬ್ಬ ಅತ್ಯದ್ಭುತ ನಟನಿರುವುದನ್ನು ಕಂಡುಕೊಂಡ ಕಿಯಾನೊ ಚಾರ್ಲ್ಸ್ ರೀವ್ಸ್ ಮೊದಮೊದಲು ತನ್ನ ಸೆಕೆಂಡರಿ ಸ್ಕೂಲ್ ಗಳಲ್ಲಿ ಅಭಿನಯಿಸಿದ ಪರಿ ನೆನೆದು ಮುಂದೇನು ಮಾಡಬೇಕೆಂದು ಯೋಜಿಸಿಕೊಂಡ. ರಂಗಶಾಲೆಯಲ್ಲಿ ಸಣ್ಣಪುಟ್ಟ ಪಾತ್ರಗಳ ನಟರು ಬರದಿದ್ದಾಗ ಸಿಕ್ಕ ಅವಕಾಶವೆಂದು ರಂಗದಲ್ಲಿ ಅಭಿನಯಿಸಿದ. ಅವನ ಭಾವನೆಗಳ ಅಭಿವ್ಯಕ್ತಿ ಹಾಗು ಆಂಗಿಕ ಚಲನೆಗೆ ಮಾರುಹೋದ ರಂಗ ನಿರ್ದೇಶಕರು ಹ್ಯಾಮ್ಲೆಟ್ ನಾಟಕದಲ್ಲಿ ಮುಖ್ಯ ಪಾತ್ರವನ್ನೇ ನೀಡಿದರು. ಷೇಕ್ಸಪಿಯರನ ಹ್ಯಾಮ್ಲೆಟ್ ನಲ್ಲಿ ಕಿಯಾನೊ ಅಭಿನಯ ಕಂಡ ಸಂಡೆ ಟೈಮ್ಸ್ ಪ್ರಧಾನ ರಿಪೋರ್ಟರ್ ರೋಜರ್ ಲೆವಿಸ್ "ನಾನು ನೋಡಿದ ಅತ್ಯದ್ಭುತ ಹ್ಯಾಮ್ಲೆಟ್ ಪಾತ್ರಧಾರಿಯೆಂದರೆ ಕಿಯಾನೋ ರೀವ್ಸದು. ಅವನದು ಪಾತ್ರದಲ್ಲಿ ಪರಕಾಯ ಪ್ರವೇಶವೇ ಸರಿ" ಎಂದು ಶ್ಲಾಘಿಸಿ ಬರೆದನು. ಇದು ಅವನ ನಟನೆಯ ಜೀವನಕ್ಕೆ ಹೆದ್ದಾರಿ ಸೃಷ್ಟಿಸಿತು.



ಮುಂದೆ ರೋಮಿಯೋ ಜೂಲಿಯಟ್ ನಾಟಕವು ಹೆಸರು ತಂದುಕೊಟ್ಟಿತು. ದೂರದರ್ಶನದ ಸಿಬಿಸಿ ಛಾನೆಲ್ ಹಾಸ್ಯ ಕಾರ್ಯಕ್ರಮ ಹ್ಯಾಂಗ್ ಇನ್ ನಿಂದ ಮತ್ತಷ್ಟು ಜನರಿಗೆ ಪರಿಚಿತ ಮಾತುಗಾರ ನಟನಾ ಕುಶಲಿಯಾದನು. ಹಣದ ಅಗತ್ಯತೆಗಳಿಗಾಗಿ ಕೋಕಾಕೋಲಾ ಜಾಹಿರಾತು, ಒನ್ ಸ್ಟೆಪ್ ಅವೇ, ವೂಲ್ಫ ಬಾಯ್ ನಂತಹ ಲಘು ಕಾರ್ಯಕ್ರಮಗಳಲ್ಲು ಮಿಂಚಿದನು. 1984 ರಲ್ಲಿ ಕೆನಡಾ ಬ್ರಾಡ್ ಕಾಸ್ಟಿಂಗ್ ಕಾರ್ಪೋರೇಷನ್ ಯುವಕರ ಕಾರ್ಯಕ್ರಮ ಗೋಯಿಂಗ್ ಗ್ರೇಟ್ ನ ವರದಿಗಾರ ನಿರೂಪಕರಾಗಿ ಜನಮನ ಗೆದ್ದನು. ಮನೆಯಲ್ಲಿ ಸದಾ ತಾಯಿಯ ಸಿಟ್ಟು ಜಗಳ ಆಡಂಭರದ ಜೀವನದ ಆಸೆಬುರುಕುತನ ಮಲತಂದೆಯರ ಹಣದ ಹಪಾಹಪಿ ನಡುವೆಯೇ ಕಿಯಾನೊ ತನ್ನ ನಟನೆಯ ಕೌಶಲವನ್ನೆ ನೆಚ್ಚಿಕೊಂಡು ಬೆಳೆಯಲು ಅತಿ ಉತ್ಸುಕನಾಗಿ ಹೊರಟನು.

ಕಿಯಾನೊ ನಟನಾ ದಾರಿ ಮುಂದೆ ಅಮೇರಿಕಾದ ಲಾಸ್ ಏಂಜಲೀಸಗೆ ಕರೆತಂದಿತು. ಅಲ್ಲಿ ಸಮರ್ಥ ಸಿನೆಮಾ ಏಜೆಂಟರ ಮೂಲಕ ಉತ್ತಮ ಚಿತ್ರಗಳ ನಟನೆಯು ದೊರಕಿತು. ರೋಬ್ ಲೊವೆ, ಯಂಗ್ ಬ್ಲಡ್, ರಿವರ್ಸ ಎಡ್ಜ, ಬಿಲ್ ಅಂಡ್ ಟೆಡ್ಸ ಮುಂತಾದ ಯಶಸ್ವಿ ಚಿತ್ರಗಳ ಹೀರೋ ಆಗಿ ಹಾಲುವುಡ್ ಚಿತ್ರರಸಿಕರ ಮನಸೂರೆಗೊಂಡನು. ತನ್ನ ಬಾಲ್ಯದ ದಡ್ಡತನ ಉಡಾಳತನ ತಂದೆ ತಂಗಿಯ ನಿರ್ಗಮನ ತಾಯಿಯ ಜವಾಬ್ದಾರಿರಹಿತತೆಯ ನಡುವೆಯೇ ತನ್ನೆಲ್ಲ ನೋವನ್ನು ನಟನೆಯ ಮೂಲಕ ಮರೆಯಲು ಪ್ರಯತ್ನಿಸಿದನು.

ಬಿಲ್ ಅಂಡ ಟೆಡ್ ಸರಣಿ ಹಾಸ್ಯ ಚಿತ್ರಗಳಲ್ಲಿ ಅದೆಷ್ಟು ತನ್ಮಯನಾಗಿ ಕಿಯಾನೋ ನಟಿಸಿದನೆಂದರೆ ಇವನೊಬ್ಬ ಸದಾ ಸಂತಸದ ಸುಖೀ ನೆಮ್ಮದಿಯ ವ್ಯಕ್ತಿಯೇನೋ ಎಂಬಂತೆ ಜನರು ಮರುಳಾಗುವ ಮಟ್ಟಿಗೆ. ಕಿಯಾನೊನ ಅಳುವ ಜೀವನದ ಕಡಲೊಳು ತೇಲಿಬರುವ ನಗೆಯ ಹಾಯಿದೋಣಿಯೆಂದರೆ ಅವನ ಸಿನೆಮಾಗಳು. ಪಾಯಿಂಟ್ ಬ್ರೇಕ್ ನಂತಹ ದುಬಾರಿ ವೆಚ್ಚದ ಚಿತ್ರಗಳು ಕಿಯಾನೊನನ್ನು ಪ್ರಪಂಚದ ಚಿತ್ರಪ್ರೇಮಿಗಳಿಗೆ ಪರಿಚಯಿಸಿತು. ಎಂಟಿವಿ ಅವಾರ್ಡ್ ಭಾಜನನಾಗಿ ಮುಂದೆ ರಿವರ್ ಫೋನಿಕ್ಸ, ಮೈ ವೋನ್ ಪ್ರೈವೈಟ್ ಐಡಾವೋ, ಸ್ಪೀಡ್ ಚಿತ್ರಗಳಿಂದ ಬಹು ಬೇಡಿಕೆಯ ಹಾಲಿವುಡ್ ನಟನಾದನು. ಅಂದಿನ ಪತ್ರಿಕೆಗಳು ಇವನನ್ನು "ಭಾವುಕತೆಯ ವ್ಯಕ್ತಿ, ಪಶುಸಹಜ ಅಂಗಸೌಷ್ಟವಹೊಂದಿದ ಸಂದರಾಂಗ ಮುಗ್ಧತೆಯ ಜೊತೆಗೆ ಅರಿ ಕೋಪವು ಸೇರಿದ ವೃತ್ತಿ ಪ್ರೇಮಿಯಾಗಿದ್ದಾನೆ. ಕುಶಲ ನಟನೆ ನಡಿಗೆಯಿಂದ ಡೆನ್ಮಾರ್ಕನ ರಾಜಕುಮಾರನೇ ಆಗಿದ್ದಾನೆಂದು ಬಣ್ಣಿಸಿದವು"

ಈ ನಡುವೆಯೇ 1999 ರಲ್ಲಿ ಅವನ ಗೆಳತಿ ಜೆನಿಫರ್ ಸಿಮ್ ಜೊತೆಗೆ ವಿವಾಹ ಬಂಧನವಾಯಿತು. ಆದರೆ ಅವನ ಬಹು ನಿರೀಕ್ಷಿತ ಪ್ರೀತಿಯ ಮೊದಲ ಮಗು ಪ್ರಸವ ಪೂರ್ವದಲ್ಲೆ ಮರಣ ಹೊಂದಿತು! ಮತ್ತೂ ದುರಂತವೆಂದರೆ ಕಿಯಾನೊನ ಪ್ರೀತಿಯ ಮಡದಿ ಜೆನಿಫರ್ ಸಿಮ್ 2001 ರಲ್ಲಿ ಕಾರು ಅಪಘಾತದಲ್ಲಿ ತೀರಿಕೊಂಡಳು. ಕಿಯಾನೊನ ಬದುಕು ಮತ್ತಷ್ಟು ದುಃಖದ ಕಡಲಾಯಿತು. ಮುಂದೆ 2008 ರಲ್ಲಿ ಒಬ್ಬ ಪೇಪರಾಜೊ ತನ್ನ ಕಾರಿಗೆ ಕಿಯಾನೊ ತನ್ನ ಪೋರ್ಶೆ ಕಾರಿನಿಂದ ಗುದ್ದಿರುವುದಾಗಿ ಗುಲ್ಲಾಯಿತು. ಕಿಯಾನೋನ ಸಿನೆಮಾ ಕೆರಿಯರ್ ಗ್ರಾಫ್ ಬುಡಮೇಲಾಗುವ ಆಪತ್ತು ಎದುರಾಯಿತು. ಆದರೆ ಮುಂದೆ ನ್ಯಾಯಾಲಯದಿ ಅದು ನಿರಾಧಾರವೆಂದು ಸಾಬೀತಾಗಿ ಕಿಯಾನೊ ಮತ್ತೆ ಸಿನೆಮಾಗಳ ನಟನೆಯಲ್ಲಿ ತೊಡಗಿದ ಮ್ಯಾಟ್ರಿಕ್ಸ್ ಸರಣಿ ಚಿತ್ರಗಳು ಗಲ್ಲಾಪಟ್ಟಿಗೆ ದೋಚಿದವು. ವಿಶೇಷವೆಂದರೆ ಭಾರತೀಯ ಕಥಾನಕದ ಲಿಟಲ್ ಬುದ್ಧದಲ್ಲಿ ಬುದ್ಧನಾಗಿ ಹಾಗು ರಾಮಾಯಣಾಧಾರಿತ ಹನುಮಾನ್ ನಲ್ಲಿ ರಾಮನಾಗಿ ಅಭಿನಯಿಸಿದ್ದಾನೆ! ಚಿಕ್ಕಂದಿನ ಬದುಕಿನ ಅಸ್ಥಿರತೆ, ತಂದೆಯಿಲ್ಲದ ಅಭದ್ರತೆ, ತಾಯಿಯ ಮಮತೆಯು ಸಿಗದೆ ಬೆಳೆದ ಕಿಯಾನೊ ಚಿತ್ರಜಗತ್ತಿನಲ್ಲಿ ಹೊಳೆವ ನಕ್ಷತ್ರವಾಗಿರುವುದೊಂದು ಅದ್ಭುತ. ತನ್ನ ಸ್ವ ಸಾಮರ್ಥ್ಯ ಹಾಗು ನಟನಾ ಚಾತುರ್ಯವನ್ನೆ ನಂಬಿಕೊಂಡು ಎಲ್ಲು ತನ್ನ ಹೆಸರು ಕೆಡಿಸಿಕೊಳ್ಳದಂತೆ ತನ್ನ ವ್ಯಕ್ತಿತ್ವದ ತೇಜಸ್ಸನ್ನು ಜಗತ್ತಿಗೆ ತೋರಿದನು.

ಕಿಯಾನೊ ತನ್ನ ವೈಯುಕ್ತಿಕ ಬದುಕಿನ ದುರಂತದಲ್ಲೆ ಯಶಸ್ವಿ ಚಿತ್ರಗಳಿಂದ ಹಣಗಳಿಸಿದ. ಹಾಗೆಯೇ ನೋವು ದಃಖ ಕಷ್ಟಗಳಲ್ಲಿದ್ದವರಿಗೆ ನೆರವಾಗಿ ಮಾನವೀಯ ಮೌಲ್ಯದ ವ್ಯಕ್ತಿಯಾದನು. ತನ್ನ ಲೇಕ್ ಹೌಸ್ ಚಿತ್ರ ಚಿತ್ರೀಕರಿಸುವಾಗ ತನ್ನ ಇಬ್ಬರು ವೇಷಭೂಷಣ ಸಹಾಯಕರ ನಡುವಿನ ಮಾತುಕತೆ ಕೇಳಿದ ಅಲ್ಲಿ ಒಬ್ಬ ಮಹಿಳೆ 20,000 ಡಾಲರ್ ಪಾವತಿಸಲು ಸಾಧ್ಯವಾಗದಿದ್ದರೆ ತನ್ನ ಮನೆಯನ್ನು ಕಳೆದುಕೊಳ್ಳಬಹುದು ಎಂದು ಅಳುತ್ತಿದ್ದಳು. ವಿಷಯ ತಿಳಿದ ಚಾರ್ಲ್ಸ್ ತನ್ನ ಸಹಾಯಕಿಗೆ ಆ ತಕ್ಷಣವೇ ಅಷ್ಟೂ ಮೊತ್ತವನ್ನು ಆಕೆಯ ಖಾತೆಗೆ ಜಮಾ ಮಾಡಿ ಅವಳ ಔದಾರ್ಯಕ್ಕೆ ಪಾತ್ರನಾದನು. 2010 ರಲ್ಲಿ ತನ್ನ ಜನ್ಮದಿನದಂದು ಬೇಕರಿಗೆ ಒಬ್ಬನೇ ಹೋಗಿ ಬಹಳ ಸರಳವಾಗಿ ಒಂದೇ ಮೇಣದಬತ್ತಿಗಿಂತ ಹೆಚ್ಚೇನೂ ಇಲ್ಲದ ಕಪ್ಕೇಕ್ ಅನ್ನು ಖರೀದಿಸಿ ಹುಟ್ಟಿದ ಹಬ್ಬ ಆಚರಿಸಿ ಅಲ್ಲಿನ ಕಾರ್ಮಿಕರಿಗು ಬೀದಿಬದಿಯ ಭಿಕ್ಷುಕರಿಗು ಬಟ್ಟೆ ಕೊಡಿಸಿ ಹಣ ನೀಡಿ ಅಲ್ಲಿದ್ದವರಿಗೆಲ್ಲ ಕೇಕ್ ಕಾಫಿ ಬ್ರೆಡ್ ಕೊಡಿಸಿ ಸಂಭ್ರಮಿಸಿದರು ಇದು ಕಿಯಾನೋ ಐಷಾರಾಮಿ ಹುಟ್ಟುಹಬ್ಬ! ಅವನ ಸರಳತೆ ಬಡವರ ಕುರಿತ ಕಕ್ಕುಲತೆ ಎಲ್ಲ ಸಿರಿವಂತರಿಗು ಮಾದರಿ. ದಿ ಮ್ಯಾಟ್ರಿಕ್ಸ್ ಟ್ರೈಲಾಜಿ ಸಿನೆಮಾದ ಅಪಾರ ಹಣ ಗಳಿಕೆಯನ್ನು ಅವರು ತನ್ನ ಚಿತ್ರದ ಟೆಕ್ನೀಷಿಯನ್ ಸಿಬ್ಬಂದಿಗೆ ವಿತರಿಸಿದರು! ಏಕೆಂದರೆ ಅವರ ಪ್ರಕಾರ ಟೆಕ್ನೀಷಿಯನ್ ಕೆಲಸಗಾರರೇ ಚಲನಚಿತ್ರಗಳ ನಿಜವಾದ ನಾಯಕರು! ಕಿಯಾನೊ ಸ್ಟಂಟ್ ಡಬಲ್ಸ್ ಅನ್ನು ಅಷ್ಟೇನೂ ಬಳಸುತ್ತಿರಲಿಲ್ಲ ನಿರ್ದಿಷ್ಟ ಮತ್ತು ಅಪಾಯಕಾರಿ ಸಾಹಸಗಳಿಗೆ ಮಾತ್ರ ಬಳಸುತ್ತಿದ್ದನು. ಈ ಕಾರಣಕ್ಕಾಗಿ ಮುಂದೆ ಅವನು ತಮ್ಮ ಸ್ಟಂಟ್‌ಮೆನ್‌ಗಳ ಕೆಲಸವನ್ನು ಒಪ್ಪಿ ಪ್ರತಿಯೊಬ್ಬರಿಗೂ ದುಬಾರಿ ಬೆಲೆಯ ಹಾರ್ಲೆ ಡೇವಿಡ್‌ಸನ್ ಮೋಟಾರ್‌ಸೈಕಲ್ ಅನ್ನು ಉಡುಗೊರೆಯಾಗಿ ನೀಡಿದರು!

ಮತ್ತೊಂದು ವಿಶೇಷವೆಂದರೆ ಕಿಯಾನೊ ಮೆಟ್ರೋ ಮತ್ತು ಬಸ್‌ಗಳಂತಹ ಇತರ ಸಾರ್ವಜನಿಕ ಸಾರಿಗೆಯನ್ನು ನಿಯಮಿತವಾಗಿ ಬಳಸುತ್ತ ತನ್ನ ಸುತ್ತಲ ಜನರ ಜೀವನ ಅರಿಯುವ ಪ್ರಯತ್ನ ಮಾಡುತ್ತಾನೆ. ಕರಗದ ಸಿರಿವಂತಿಕೆಯಿದ್ದರು ಸಾರ್ವಜನಿಕರ ಜೊತೆ ಬೆರೆಯಲು ಸಂಕೋಚಪಡದ ಮೃದು ಮನಸ್ಸಿನವ ಕಿಯಾನೊ! ಹತ್ತು ಹಲವು ಆಸ್ಪತ್ರೆಗಳು ಆತನಿಂದ ಹತ್ತಾರು ಮಿಲಿಯನ್ ಡಾಲರ್ ಪಡೆದಿರುವುದಾಗಿ ವರದಿ ಮಾಡಿವೆ. ಅವನು ತನ್ನ ಚಿತ್ರದ ಗಳಿಕೆಯ ಶೇಕಡಾ ತೊಂಬತ್ತು ಭಾಗ ಕೆಲವು ಹೊಸ ಚಿತ್ರಗಳಿಗೆ ದೇಣಿಗೆ ನೀಡಿದರು. ಇದರಿಂದಾಗಿ ಚಿತ್ರ ನಿರ್ಮಾಣದಲ್ಲಿ ಇತರ ಹೊಸ ತಾರೆಯರನ್ನು ನೇಮಿಸಿಕೊಳ್ಳಲಿ ಅವರು ಬೆಳೆಯಲಿ ಎಂಬ ಉದಾರತೆಯಿಂದ!

ಕಿಯಾನೊ ಚಾರ್ಲ್ಸ್ ರೀವ್ಸ ಬೆಳೆದಂತೆ ಬದುಕಿನ ಯಶಸ್ಸೆಂದರೆ ಕೇವಲ ಜೀವನದಿ ಗೆಲುವಲ್ಲ ಹಣದ ಗಳಿಕೆಯಲ್ಲ ಮನೆ ಮಹಲುಗಳಲ್ಲ ಎಂದು ಅರಿತನು. ತನ್ನ ಸುತ್ತಲ ಜನರ ಸಂಕಷ್ಟಗಳಿಗೆ ಸ್ಪಂದಿಸುವುದು ಅವರ ಬದುಕಿನ ದುಃಖ ನಿವಾರಿಸುವುದು ನಿಜವಾದ ಯಶಸ್ಸು ಎಂದು ತಿಳಿದನು. ಅದರಂತೆಯೇ ಅಬಲರಿಗೆ ನೆರವಾಗಿ ಬಾಳಿದನು. ತನ್ನ ಜೀವನದ ನೂರು ಕಷ್ಟಗಳ ಎಲ್ಲಿಯೂ ಹೇಳದೆ ನಿರಾಶಾವಾದಿಯಾಗಿ ಕೊರಗದೆ ವಿಶಾಲ ದೃಷ್ಟಿಕೋನದಿಂದ ಜೀವನ ಅರ್ಥ ಮಾಡಿಕೊಂಡು ಪ್ರಪಂಚದ ಜೀವನದಲ್ಲಿ ಕೆಟ್ಟದ್ದನ್ನು ದೂರಮಾಡಿ ಒಳಿತನ್ನು ಮಾತ್ರವೇ ಸ್ವೀಕರಿಸಿ ಒಳಿತನ್ನೇ ಹಂಚುತ್ತಾ ಬದುಕಿದನು.



» **ಡಾ.ಉಮೇಶ್ ಟಿ.ಪಿ.**
**ಸಾಹಿತಿಗಳು, ರಾಷ್ಟ್ರಪ್ರಶಸ್ತಿ ಪುರಸ್ಕೃತ ಶಿಕ್ಷಕರು ತುಪ್ಪದಹಳ್ಳಿ, ಹೊಳಲ್ಕೆರೆ**

## ಅವಧಿ ವಿಸ್ತರಣೆ

**ದಾವಣಗೆರೆ:** ಪ್ರಸಕ್ತ ಸಾಲಿನ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ಶುಲ್ಕ ವಿನಾಯಿತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿಸಲ್ಲಿಸುವ ದಿನಾಂಕವನ್ನು ಮಾರ್ಚ್ 10 ರವರೆಗೆ ವಿಸ್ತರಿಸಲಾಗಿದೆ. ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವಂತೆ ಹಿಂದುಳಿದ ವರ್ಗಗಳ ಜಿಲ್ಲಾ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ .

## ಇ-ಖಾತಾ ಅಭಿಯಾನ

**ದಾವಣಗೆರೆ:** ಫೆಬ್ರವರಿ 19 ರಿಂದ ಮೇ 10 ರವರೆಗೆ ಮಹಾನಗರ ಪಾಲಿಕೆಯ ವಲಯ ಕಚೇರಿಯಲ್ಲಿ ಇ-ಖಾತಾ ಅಭಿಯಾನವನ್ನು ಆಯೋಜಿಸಲಾಗಿದೆ. ನಗರದಲ್ಲಿನ ನಿವೇಶನಗಳು, ಕಟ್ಟಡಗಳು ಭೂಪರಿವರ್ತನೆಯಾಗದೆ ಉಪವಿಭಜನೆ ಮಾಡಿ ಮಾರಾಟ ಮಾಡಿರುವ ನಿವೇಶನ,ಕಟ್ಟಡಗಳಿಗೆ 24 ಸೆಪ್ಟೆಂಬರ್ 2024 ರ ಒಳಗೆ ನೋಂದಣಿಯಾಗಿರುವ ಆಸ್ತಿಗಳಿಗೆ ಇ-ಆಸ್ತಿ ತಂತ್ರಾಂಶದಿಂದ 2ಎ ನಮೂನೆ ಸೃಜಿಸಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮಹಾನಗರಪಾಲಿಕೆಯಲ್ಲಿ ಸ್ಥಾಪಿಸಲಾಗಿರುವ ಸಹಾಯವಾಣಿ ಸಂ:08192-234444, ವಾಟ್ಸ್‌ಪ್ ನಂ: 8277234444 ನ್ನು ಸಂಪರ್ಕಿಸಿ.

## ಗೋಮಾತೆ ಹಿಂದೂಸನಾತನಧರ್ಮದ ಗೌರವಪ್ರತೀಕ: ರಾಜರಾಮ್

» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಗೋವುಗಳ ದಾರಣಹೋಮ ನಡೆಯುತ್ತಿದ್ದು, ಇದು ನಮ್ಮ ಸಂಸ್ಕೃತಿಗೆ ನೋವಿನ ಸಂಗತಿಯಾಗಿದೆ. ಸಂಸ್ಕಾರ ಇರುವ ಯಾವವ್ಯಕ್ತಿಯೂ ಇಂತಹ ಕಾರ್ಯವನ್ನು ಎಂದಿಗೂ ಮಾಡಲು ಸಾಧ್ಯವಿಲ್ಲ. ನಮ್ಮ ಹಿಂದೂ ಸನಾತನ ಧರ್ಮದಲ್ಲಿ ಗೋಮಾತೆಗೆ ವಿಶೇಷ ಮಾನ್ಯತೆಯನ್ನು ನೀಡಲಾಗಿದೆ. ಗೋಮಾತೆಯನ್ನು ಪೂಜಿಸುವ ನಾವುಗಳು ಅವುಗಳ ಸಂರಕ್ಷಣೆಗೆ ಮುಂದಾಗಬೇಕೆಂದು ನರಹರಿಸೇವಾಪ್ರತಿಷ್ಠಾನದ ಅಧ್ಯಕ್ಷ ಡಾ.ವೈ. ರಾಜರಾಮ್‌ಸ್ವಾಮಿ ತಿಳಿಸಿದರು.

ಅವರು, ಬುಧವಾರ ಸಂಜೆ ವಾಸವಿಮಹಲ್‌ನಲ್ಲಿ ನಂದಿರಥಯಾತ್ರೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಶಿವನನ್ನು ಹೊತ್ತು ನಡೆಯುವ ನಂದಿ ಶಿವನಿಂದಲೇ ಸೃಷ್ಠಿಯಾದ ಮಹಾನ್ ಭಗವಾನ್‌ಸ್ವರೂಪಿಯಾಗಿದ್ದಾನೆ. ಪ್ರತಿಯೊಂದು ಹಂತದಲ್ಲೂ ನಾವುಗಳು




ಪೂಜೆಮಾಡುವಸಂದರ್ಭದಲ್ಲಿಗೋಮಾತೆ ಹಾಗೂ ನಂದಿಯನ್ನು ಭಕ್ತಿಯಿಂದ ಪೂಜಿಸುತ್ತಾ ಬಂದಿದ್ದೇವೆ. ಗೋವುಗಳ ಸಂರಕ್ಷಣೆಗೆ ಗೋಸೇವಾಗತಿವಿಧಾನ ಕರ್ನಾಟಕ ರಾಘಸುರಭಿ ಗೋಮಂದಿರ, ರಾಷ್ಟ್ರೀಯ ಗೋಸೇವಾಸಂಸ್ಥಾನ ಟ್ರಸ್ಟ್ ಯಾತ್ರೆ ಹಮ್ಮಿಕೊಂಡಿರುವುದು ಸಂತಸ ತಂದಿದೆ ಎಂದರು.

ಶಾರದಾಶ್ರಮದ ಮಾತಾಜಿತ್ಯಾಗಮಯಿ ಮಾತನಾಡಿ, ನಾವುಯಾವುದನ್ನು ಅನಾದಿಕಾಲದಿಂದಲೂ ಗೌರವ ಆಧಾರಗಳಿಂದ ಪೂಜೆ ಮಾಡುತ್ತಾ ಬಂದಿದ್ದೇವೋ ಅಂತಹ ಗೋವುಗಳ ಉಳಿವಿಗೆ ಹೋರಾಡುವ ಸ್ಥಿತಿ ಉಂಟಾಗಿದೆ. ಗೋವುಗಳು ನಮ್ಮ ಬದುಕಿಗೆ ಬೇಕಾಗುವ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸುತ್ತವೆ. ಗೋವುಗಳಿಲ್ಲದೆ ನಾವ್ಯಾರು ಅರ್ಥಪೂರ್ಣವಾಗಿ ಬದುಕಲು ಸಾಧ್ಯವಿಲ್ಲವೆಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಯೋಗಶಿಕ್ಷಕ ಮಹೇಶ್, ಇಂದು ಚಳ್ಳಕೆರೆ ನಗರದಲ್ಲಿನಂದಿರಥಯಾತ್ರೆ ಮೂಲಕ ಗೋವುಗಳ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಎಲ್ಲಿಯಾಗಲಿ ಗೋವುಗಳ ವಧೆಯಾದಲ್ಲಿ ಅವುಗಳನ್ನು ರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು. ಕಾರ್ಯಕ್ರಮದಲ್ಲಿ ಸದಾಗೋವುಗಳನ್ನು ಸಂರಕ್ಷಿಸುವ ಮೂಲಕ ರಾಜ್ಯೋತ್ಸವ ಪ್ರಶಸ್ತಿ ಪಡೆದ ಬಂಗಾರದೇವರಹಟ್ಟಿಯ ಕಿಲಾರಿಜ್ಯೋಗಯ್ಯ, ಕಾಲುವೇಹಳ್ಳಿ ಪಾರ್ವತಮ್ಮ, ಎತ್ತಿನಗೌಡರಹಟ್ಟಿಯ ಪಾಲಯ್ಯರವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆರ್ಯವೈಶ್ಯಸಂಘದ ಅಧ್ಯಕ್ಷ ಡಿ.ಎಂ. ಕೃಷ್ಣಮೂರ್ತಿವಹಿಸಿದ್ದರು,ಕಾರ್ಯಕ್ರಮಕ್ಕೂ ಮುನ್ನ ಚಳ್ಳಕೆರೆಯಮ್ಮ ದೇವಸ್ಥಾನದಿಂದ ಮೆರವಣಿಗೆ ಆರಂಭವಾಯಿತು, ಸಮಾಜದ ಅನೇಕ ಹಿರಿಯರು, ವಿವಿಧ ಸಂಘ ಸಂಸ್ಥೆಯ ಪ್ರತಿನಿಧಿಗಳು, ವಾಸವಿಮಹಿಳಾಸಂಘ, ವಿಪ್ರಗಾಯಿತ್ರಿಮಹಿಳಾ ಸಂಘ, ಮ್ಯಾಸಬೇಡರಪಡೆ ಮೆರವಣಿಗೆ ಯಲ್ಲಿ ಭಾಗವಹಿಸಿದ್ದವು. ಕಾರ್ಯಕ್ರಮದಲ್ಲಿ ವಿಶ್ವಹಿಂದೂ ಪರಿಷತ್ ಅಧ್ಯಕ್ಷ ಡಾ.ಮಂಜುನಾಥ, ಗಂಗಾಧರ, ಬಾಳೆಮಂಡಿರಾಮದಾಸ್, ಕೆ.ಟಿ.ಕುಮಾರಸ್ವಾಮಿ, ಸೂರನಹಳ್ಳಿ ಶ್ರೀನಿವಾಸ್, ಡಿ.ದಯಾನಂದ, ಮಧುಸೂಧನ, ಉಮೇಶ್, ಸಿದ್ದೇಶ್, ಕಾರ್ಯವಾಹ ಚಂದ್ರಶೇಖರ್, ಶ್ರೀನಿವಾಸ್‌ಮೂರ್ತಿ ಪಾಲ್ಗೊಂಡಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T